# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 210 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 07–03–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 210 | Title- Code: KARKAN 28269 | Chitradurga | Date: 07-03-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಅಂಚೆಯಿಂದ ಸಕಾಲದಲ್ಲಿ ಮಾಸಾಶನ ತಲುಪಿಸಲು ಸೂಚನೆ 2

ಕುಡಿಯುವ ನೀರಿನ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ: ಕೆ.ಸಿ.ವೀರೇಂದ್ರ 3

ಕುಡಿಯುವ ನೀರಿನ ಸಮಸ್ಯೆಗೆ ತ್ವರಿತವಾಗಿ ಸ್ಪಂದಿಸಿ: ಕೇಂದ್ರ ಸಚಿವ ನಾರಾಯಣಸ್ವಾಮಿ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಜಾಣ್ಮೆಯಂಥ ಸಂಪತ್ತು ತಾಳ್ಮೆಯಂಥ ಆಯುಧ ಇನ್ನೊಂದಿಲ್ಲ. ನಮ್ಮ ಎಲ್ಲಾ ವ್ಯವಹಾರಗಳಲ್ಲಿ ಜಾಣ್ಮೆ ಮತ್ತು ತಾಳ್ಮೆಯನ್ನು ಹದವಾಗಿ ಬಳಸಿಕೊಂಡು ಯಶಸ್ವಿಯಾಗೋಣ

» ಶುಭೋದಯ

# ತಾಯಿ ಮಕ್ಕಳ ಆಸ್ಪತ್ರೆ ಲೋಕಾರ್ಪಣೆ

## ಸಿಜೇರಿಯನ್ ಪ್ರಮಾಣ ತಗ್ಗಿಸಿ, ಉತ್ತಮ ಆರೋಗ್ಯ ಸೇವೆ ನೀಡಿ: ಕೇಂದ್ರ ಸಚಿವ ಎ.ನಾರಾಯಣಸ್ವಾಮಿ

» ಚಿತ್ರದುರ್ಗ

ದೇಶದಲ್ಲಿ ಸಿಜೇರಿಯನ್ ಹೆರಿಗೆ ಪ್ರಮಾಣ ಶೇ.30 ರಷ್ಟಿದೆ. ಅದರೆ ಚಿತ್ರದುರ್ಗ ಜಿಲ್ಲೆಯಲ್ಲಿ ಈ ಪ್ರಮಾಣ ಶೇ.60 ರಷ್ಟು ಹಾಗೂ ತುಮಕೂರಿನ ಜಿಲ್ಲೆಯ ಪಾವಗಡ ತಾಲ್ಲೂಕಿನಲ್ಲಿ ಶೇ.70 ರಷ್ಟಿರುವುದು ಕಳವಳಕಾರಿಯಾಗಿದೆ. ವೈದ್ಯರು ಸಿಜೇರಿಯನ್ ಪ್ರಮಾಣ ತಗ್ಗಿಸಿ, ಉತ್ತಮ ಆರೋಗ್ಯ ಸೇವೆ ನೀಡಲು ಮುಂದಾಗಬೇಕು ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಖಾತೆ ಸಚಿವ ಎ.ನಾರಾಯಣ ಸ್ವಾಮಿ ಹೇಳಿದರು.

ರಾಷ್ಟ್ರೀಯ ಆರೋಗ್ಯ ಅಭಿಯಾನ (ಎನ್.ಹೆಚ್.ಎಂ) ಅಡಿಯಲ್ಲಿ ನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ನೂತನವಾಗಿ ನಿರ್ಮಿಸಲಾಗಿರುವ 100 ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆಯನ್ನು ಬುಧವಾರ ಲೋಕಾರ್ಪಣೆ ಮಾಡಿದ ಅವರು ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದರು. ನ್ಯಾಷನಲ್ ಹೆಲ್ತ್ ಮಿಷನ್ ಅಡಿಯಲ್ಲಿ ರೂ.10 ಕೋಟಿ ವೆಚ್ಚದಲ್ಲಿ ಸುಸಜ್ಜಿತ ತಾಯಿ ಮಕ್ಕಳ ಆಸ್ಪತ್ರೆ ಕಟ್ಟಡ ನಿರ್ಮಾಣ ಮಾಡಲಾಗಿದೆ. ಇದರ ಸದುಪಯೋಗ ಆಗಬೇಕು. ಆಸ್ಪತ್ರೆ ತಾಯಿ ಮಕ್ಕಳಿಗೆ ಆಸರೆಯಾಗಬೇಕು. ನಾಯಕನಹಟ್ಟಿಯಲ್ಲಿ ರೂ.8 ಕೋಟಿ, ಚಳ್ಳಕೆರೆಯಲ್ಲಿ ರೂ 13 ಕೋಟಿ, ಹಾಗೂ ಹಿರಿಯೂರು ನಗರದಲ್ಲಿ ರೂ.6 ಕೋಟಿ ವೆಚ್ಚದಲ್ಲಿ ತಾಯಿ ಮಕ್ಕಳ ಆಸ್ಪತ್ರೆ ನಿರ್ಮಿಸಲಾಗಿದೆ. ಇದುವರೆಗೂ ಜಿಲ್ಲೆಯಲ್ಲಿ ಎನ್.ಹೆಚ್.ಎಂ. ಅಡಿ ರೂ.260 ಕೋಟಿ ವ್ಯಯಿಸಲಾಗಿದೆ. ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಯೋಜನೆಯಡಿ ಜಿಲ್ಲೆಯಲ್ಲಿ 2,25,250 ಜನರು ನೊಂದಣಿಯಾಗಿದ್ದಾರೆ. ಇದುವರೆಗೂ ರೂ.51 ಕೋಟಿ ಹಣ ಆಯುಷ್ಮಾನ್ ಯೋಜನೆಯಡಿ ಜಿಲ್ಲೆಗೆ ಬಿಡುಗಡೆ ಮಾಡಲಾಗಿದೆ. ಜನನಿ ಸುರಕ್ಷಾ ಯೋಜನೆ ಸೇರಿದಂತೆ ಅನೇಕ ಸೇವೆಗಳನ್ನು ಸಹ ನೀಡಲಾಗುತ್ತಿದೆ. ಆದರೆ ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಅಗತ್ಯ ಸ್ಪಂದನೆ ಸಿಗುತ್ತಿಲ್ಲ.ವೈದ್ಯರು ಹಾಗೂ ವೈದ್ಯಕೀಯ ಸಿಬ್ಬಂದಿ ಉತ್ತಮವಾಗಿ ಕರ್ತವ್ಯ ನಿರ್ವಹಿಸಬೇಕು. ನುರಿತ ವೈದ್ಯರಿಂದ ಸೇವೆ ದೊರೆಯದಿದ್ದರೆ, ಜನರು ರಾಜಕಾರಣಿಗಳಿಗೆ ಶಾಪ ಹಾಕುತ್ತಾರೆ. ಇತ್ತೀಚಿಗೆ ಪಾವಗಡದಲ್ಲಿ ಕುಟುಂಬ ಯೋಜನೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗೆ ಒಳಗಾದ ಮೂವರು ಮಹಿಳೆಯರು ಮೃತರಾಗಿದ್ದಾರೆ. ಇದಕ್ಕೆ ಕಾರಣ ವೈದ್ಯರು ಹಣಕ್ಕಾಗಿ ಸ್ಪರ್ಧೆ ಮಾಡಿ, ಯಾವುದೇ ಮುಂಜಾಗ್ರತ ಕ್ರಮ ಇಲ್ಲದೆ ಆಪರೇಷನ್ ಮಾಡಿದ್ದಾಗಿದೆ ಎನ್ನಲಾಗುತ್ತಿದೆ ಹೀಗಾದರೇ ಜನರು ವೈದ್ಯರನ್ನು ನಂಬುವುದು ಹೇಗೆ ? ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಜೇರಿಯನ್ ಪ್ರಮಾಣ ಇಳಿಕೆ ಮಾಡಬೇಕು. ಅನಾರೋಗ್ಯಕ್ಕೆ ಒಳಪಟ್ಟು ಆಗಮಿಸುವ ರೋಗಿಗಳಿಗೆ ಆರೋಗ್ಯ ಸುಧಾರಣೆ ಆಗಿ ಸುರಕ್ಷಿತವಾಗಿ ಮನೆಗೆ ತೆರಳುವಂತಾಗಬೇಕು ಎಂದರು.



ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಮಾತನಾಡಿ, ಜನರು ವೈದ್ಯೋ ನಾರಾಯಣೋ ಹರಿ ಎಂದು ಭಾವಿಸಿ ಗೌರವ ನೀಡುತ್ತಾರೆ. ವೈದ್ಯರ ಸೇವೆಗೆ ಬೆಲೆ ಕಟ್ಟಲು ಸಾಧ್ಯವಿಲ್ಲ. ವೈದ್ಯರು ಉತ್ತಮ ಸೇವೆ ನೀಡಬೇಕು. ಚಿತ್ರದುರ್ಗ ಜಿಲ್ಲೆ ಸದಾ ಬರಗಾಲಕ್ಕೆ ತುತ್ತಾಗಿ ಜನರು ಸಂಕಷ್ಟದ ಸ್ಥಿತಿಯಲ್ಲಿ ಇರುತ್ತಾರೆ. ಬಡವರೇ ಹೆಚ್ಚಾಗಿ ಜಿಲ್ಲಾ ಆಸ್ಪತ್ರೆಗೆ ಬರುತ್ತಾರೆ. ಅವರಿಗೆ ಸ್ಪಂದನೆ ನೀಡಬೇಕು. ರೋಗಿಗಳನ್ನು ಬೇರೆ ಕಡೆಗೆ ಶಿಫಾರಸ್ಸು ಮಾಡುವುದು ನಿಲ್ಲಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರ ಸಾಕಷ್ಟು ಅನುದಾನ ನೀಡುತ್ತಿವೆ. ಈ ನಿಟ್ಟಿನಲ್ಲಿ ಉತ್ತಮ ಆರೋಗ್ಯ ಸೇವೆ ನೀಡಬೇಕು. ಹಳೆಯ ಕಟ್ಟಡದಲ್ಲಿ ಇರುವ ತಾಯಿ ಮಕ್ಕಳ ಆಸ್ಪತ್ರೆಯನ್ನು ಸಂಪೂರ್ಣವಾಗಿ ನೂತನ ಕಟ್ಟಡಕ್ಕೆ ಸ್ಥಳಾಂತರಿಸುವಂತೆ ಸೂಚನೆ ನೀಡಿದರು.

ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಮಾತನಾಡಿ, ಚಿತ್ರದುರ್ಗ ನಗರದ ಜಿಲ್ಲಾ ಆಸ್ಪತ್ರೆ 100 ವರ್ಷಗಳಷ್ಟು ಹಳೆಯದಾಗಿದೆ. ಅಕ್ಕ ಪಕ್ಕದ ಜಿಲ್ಲೆಯ ಜೊತೆಗೆ ಹೊರ ರಾಜ್ಯಗಳಿಂದ ರೋಗಿಗಳು ಬರುತ್ತಾರೆ. ಜಿಲ್ಲಾ ಆಸ್ಪತ್ರೆಯಲ್ಲಿ 9 ಡಯಾಲಿಸಿಸ್ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಈ ಘಟಕಗಳನ್ನು 15ಕ್ಕೆ ಏರಿಸಲು ಕ್ರಮವಹಿಸಲಾಗಿದೆ. ಇದರೊಂದಿಗೆ ಸಿ.ಎಸ್.ಅರ್ ನಿಧಿಯಲ್ಲಿ ಸಂಚಾರಿ ಡಯಾಲಿಸಿಸ್ ಘಟಕ ನೀಡಲು ಖಾಸಗಿ ಕಂಪನಿಗೆ ಕೋರಲಾಗಿದೆ. ಜಿಲ್ಲಾ ಆಸ್ಪತ್ರೆಯಲ್ಲಿ ಎಂ.ಆರ್.ಐ ಸ್ಕ್ಯಾನಿಂಗ್ ಸೌಲಭ್ಯ ಲಭ್ಯವಿದೆ. 2021ರಲ್ಲಿಯೇ ತಾಯಿ ಮಕ್ಕಳ ಆಸ್ಪತ್ರೆ ಉದ್ಘಾಟನೆ ಮಾಡಬೇಕಿತ್ತು. ಕೋವಿಡ್ ಸಂದರ್ಭದಲ್ಲಿ ಆಸ್ಪತ್ರೆ ಕಟ್ಟಡವನ್ನು ರೋಗಿಗಳ ಚಿಕಿತ್ಸೆಗೆ ಬಳಸಲಾಗಿತ್ತು. ಕಳೆದ 6 ತಿಂಗಳಿಂದ ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ಉತ್ತಮ ಸೇವೆ ದೊರೆಯುತ್ತದೆ. ಜಿಲ್ಲಾ ಆಸ್ಪತ್ರೆಯಲ್ಲಿ ತಿಂಗಳಿಗೆ ಸರಾಸರಿ 600 ರಿಂದ 700 ಸಹಜ ಹೆರಿಗೆ ಸೇರಿದಂತೆ, ಸುಮಾರು 1200 ರಿಂದ 1500 ಹೆರಿಗೆ ಆಗುತ್ತಿವೆ. ವೈದರು ಹಾಗೂ ವೈದ್ಯಕೀಯ ಸಿಬ್ಬಂದಿ ಆಸ್ಪತ್ರೆಗೆ ಬರುವ ರೋಗಿಗಳನ್ನು ಕುಟುಂಬ ಸದಸ್ಯರಂತೆ ಭಾವಿಸಿ ಸೇವೆ ನೀಡುವಂತೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಸಲಹೆ ನೀಡಿದರು.


ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ. ಅನ್ವರ್ ಭಾಷಾ, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಜಿಲ್ಲಾಧಿಕಾರಿ.ಟಿ.ವೆಂಕಟೇಶ್, ಜಿಲ್ಲಾ ಪೊಲೀಸ್‌ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಧಿಕಾರಿ ಡಾ.ರೇಣುಪ್ರಸಾದ್.ಜಿ.ಪಿ, ಚಿತ್ರದುರ್ಗ ವೈದ್ಯಕೀಯ ಕಾಲೇಜು ವಿಶೇಷಧಿಕಾರಿ ಡಾ.ಡಿ.ವೈ.ಯುವರಾಜ್, ಜಿಲ್ಲಾ ಆರ್.ಸಿ.ಹೆಚ್.ಅಧಿಕಾರಿ ಡಾ.ಅಭಿನವ್ ಸೇರಿದಂತೆ, ಆರೋಗ್ಯ ರಕ್ಷಣಾ ಸಮಿತಿ ಸದಸ್ಯರು ಸೇತರಿದಂತೆ ಮತ್ತಿತರರು ಉಪಸ್ಥಿತರಿದ್ದರು. ಬಿ.ಎಸ್. ನರ್ಸಿಂಗ್ ವಿದ್ಯಾರ್ಥಿನಿ ಸುಮಯ ಅವರ ತಂಡ ನಾಡಗೀತೆ ಹಾಗೂ ಪ್ರಾರ್ಥನೆ ನೆರವೇರಿಸಿದರು. ಮಕ್ಕಳ ತಜ್ಞ ಡಾ.ದೇವರಾಜ ಸ್ವಾಗತ ಕೋರಿದರು. ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಪ್ರಾಸ್ತಾವಿಕವಾಗಿ ಮಾತನಾಡಿದರು. ಜನಪದ ಕಲಾವಿದ ಮಂಜು ಮಾತೃವಂದನೆ ಗೀತೆ ಹಾಡಿದರು.

## ನ್ಯಾ.ಸುಮಾಗೆ ನಾಯಕ ಸಮಾಜದಿಂದ ಸನ್ಮಾನ

» ಚಿತ್ರದುರ್ಗ

ಜೀವನದಲ್ಲಿ ಎದುರಾಗುವ ಸವಾಲುಗಳನ್ನು ಮೆಟ್ಟಿ ನಿಂತು ಉನ್ನತ ಹುದ್ದೆ ಅಲಂಕರಿಸಬೇಕಾದರೆ ಶಿಕ್ಷಣ ಬಹಳ ಮುಖ್ಯ ಎಂದು ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಚಾರ್ಯರಾದ ಡಾ.ಹೆಚ್. ಗುಡ್ಡದೇಶ್ವರಪ್ಪ ಹೇಳಿದರು.ನ್ಯಾಯಾಧೀಶ ಹುದ್ದೆಗೆ ನೇಮಕಗೊಂಡಿರುವ ಕೋಡೇನಹಟ್ಟಿಯ ಟಿ.ಸುಮರವರನ್ನು ನಾಯಕ ಸಮಾಜದ ವತಿಯಿಂದ ಸನ್ಮಾನಿಸಿದ ಸಂದರ್ಭದಲ್ಲಿ ಮಾತನಾಡಿದ ಅವರು ಹೆಚ್ಚು ಶ್ರಮಿಕರಿರುವ ಈ ಗ್ರಾಮದಲ್ಲಿ ಟಿ.ಸುಮ ನ್ಯಾಯಾಧೀಶೆಯಾಗಿ ಆಯ್ಕೆಯಾಗಿರುವುದು ಹೆಮ್ಮೆಯ ವಿಷಯ. ಎರಡು ಬಾರಿ ಪ್ರಯತ್ನಿಸಿ ಮೂರನೆ ಬಾರಿಗೆ ಯಶಸ್ವಿಯಾಗಿದ್ದಾರೆ. ತಂದೆ ತಿಪ್ಪೇಸ್ವಾಮಿ ಆಟೋ ಚಾಲಕ, ತಾಯಿ ಗೃಹಿಣಿಯಾಗಿದ್ದುಕೊಂಡು ಮಗಳಿಗೆ ಕಾನೂನು ಶಿಕ್ಷಣ ಕೊಡಿಸಿರುವುದು ಕಮ್ಮಿ ಸಾಧನೆಯಲ್ಲ.


ಪುಟ 2

## ದ್ವಿತೀಯ ಪಿಯು: 9 ವಿದ್ಯಾರ್ಥಿ ಗೈರು

ಚಿತ್ರದುರ್ಗ: ಮಾರ್ಚ್ 06 ರಂದು ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಮಾಹಿತಿ ತಂತ್ರಜ್ಞಾನ ವಿಷಯದ ಪರೀಕ್ಷೆಗೆ 03 ವಿದ್ಯಾರ್ಥಿಗಳು, ಆಟೋಮೊಬೈಲ್ ವಿಷಯದ ಪರೀಕ್ಷೆಗೆ 05 ವಿದ್ಯಾರ್ಥಿಗಳು ಹಾಗೂ ಬ್ಯೂಟಿ ಅಂಡ್ ವೆಲ್‌ನೆಸ್ ವಿಷಯದ ಪರೀಕ್ಷೆಗೆ 01 ವಿದ್ಯಾರ್ಥಿ ಸೇರಿದಂತೆ ಒಟ್ಟು 9 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಮಾಹಿತಿ ತಂತ್ರಜ್ಞಾನ ವಿಷಯದಲ್ಲಿ 46 ವಿದ್ಯಾರ್ಥಿಗಳು ನೋಂದಣಿಯಾಗಿದ್ದು, 43 ವಿದ್ಯಾರ್ಥಿಗಳು ಹಾಜರಾಗಿ, 03 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಆಟೋ ಮೊಬೈಲ್ ವಿಷಯದಲ್ಲಿ 30 ವಿದ್ಯಾರ್ಥಿಗಳು ನೋಂದಣಿಯಾಗಿದ್ದು, 25 ವಿದ್ಯಾರ್ಥಿಗಳು ಪರೀಕ್ಷೆ ಹಾಜರಾಗಿ, 05 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಬ್ಯೂಟಿ ಅಂಡ್ ವೆಲ್‌ನೆಸ್ ವಿಷಯದಲ್ಲಿ 30 ವಿದ್ಯಾರ್ಥಿಗಳು ನೋಂದಣಿಯಾಗಿದ್ದು, 29 ವಿದ್ಯಾರ್ಥಿಗಳು ಹಾಜರಾಗಿ, 01 ವಿದ್ಯಾರ್ಥಿ ಗೈರಾಗಿದ್ದಾರೆ. ಜಿಲ್ಲೆಯ 04 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಿತು.

### ಪ್ರಮುಖ ಸುದ್ದಿ

# ಸಾಗುವಳಿದಾರರಿಗೆ ಹಕ್ಕುಪತ್ರ ನೀಡುವಂತೆ ಒತ್ತಾಯ

» ಚಿತ್ರದುರ್ಗ

ಅರಣ್ಯ ಭೂಮಿ ಸರ್ಕಾರಿ ಗೋಮಾಳ ಹುಲ್ಲುಬನ್ನಿ ಸೇಂದಿವನದಲ್ಲಿ ಬಗರ್ ಹುಕುಂ ಸಾಗುವಳಿದಾರರಿಗೆ ಹಕ್ಕುಪತ್ರ ನೀಡಬೇಕು. ಅರಣ್ಯ ಅತಿಕ್ರಮಣಕಾರರು 75 ವರ್ಷದ ದಾಖಲು ನೀಡಬೇಕು ಎಂಬುದನ್ನು 25 ವರ್ಷಕ್ಕೆ ಇಳಿಸಬೇಕು. ಭರಮಸಾಗರ ಪಿ.ಯು.ಸಿ. ಕಾಲೇಜನ್ನು ಮಂಜೂರಾತಿ ಮಾಡಬೇಕು ಸೇರಿದಂತೆ ವಿವಿಧ ಬೇಡಿಕೆಯನ್ನು ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಚಿತ್ರದುರ್ಗ ಜಿಲ್ಲಾ ಸಮಿತಿ ಉಚ್ಚವ್ವನಹಳ್ಳಿ ಮಂಜುನಾಥ ಬಣ ಚಿತ್ರದುರ್ಗ ತಾಲ್ಲೂಕು ಸಮಿತಿವತಿಯಿಂದ ಪ್ರತಿಭಟನೆ ನಡೆಸಲಾಯಿತು.ಚಿತ್ರದುರ್ಗ ಯೂನಿಯನ್ ಪಾರ್ಕ್‌ನಿಂದ ಜಿಲ್ಲಾಧಿಕಾರಿಗಳ ಕಛೇರಿವರೆಗೆ ಪಾದಯಾತ್ರೆ ಮುಖಾಂತರ ಪ್ರತಿಭಟನೆ ನಡೆಸಿದ ರೈತ ಸಂಘದ ಪದಾಧಿಕಾರಿಗಳು, ರಾಜ್ಯದ ಭೂರೈತ ಕೃಷಿ ಕಾರ್ಮಿಕರು ಸುಮಾರು 12 ಲಕ್ಷಕ್ಕೂ ಹೆಚ್ಚು ಹೆಕ್ಟೇರ್ ಪ್ರದೇಶದಲ್ಲಿ ಆರಣ್ಯ ಭೂಮಿ ಹಾಗೂ ಸರ್ಕಾರಿ ಗೋಮಾಳ ಹುಲ್ಲು ಬನ್ನಿ, ಸೇಂದಿವನ, ಇತರೆ ಹೆಸರಿನಲ್ಲಿರುವ ರಾಜ್ಯ ಸರ್ಕಾರದ ಭೂಮಿಯನ್ನು ಹಲವಾರು ತಲೆಮಾರುಗಳಿಂದ ಸಾಗುವಳಿ ಮಾಡಿಕೊಂಡು ಜೀವನ ಮಾಡುತ್ತಿದ್ದಾರೆ. ಇಂತ ಭೂರಹಿತ ಕೃಷಿ ಕಾರ್ಮಿಕರಿಗೆ ರಾಜ್ಯ ಸರ್ಕಾರ ಭೂಮಿಯನ್ನು ಮಂಜೂರಾತಿಯನ್ನು ನೀಡಬೇಕು ಎಂದು ಆಗ್ರಹಿಸಿದರು.



ರಾಜ್ಯದಲ್ಲಿ ಆರಣ್ಯ ಭೂಮಿಯನ್ನು 85 ರಿಂದ 90 ವರ್ಷಗಳಿಂದ ಸಾಗುವಳಿ ಮಾಡಿಕೊಂಡು ಬರುತ್ತಿರುವ ರೈತರನ್ನು ಅರಣ್ಯ ಇಲಾಖೆ ಅಧಿಕಾರಿಗಳು ರೈತರ ಮೇಲೆ ದೌರ್ಜನ್ಯದಿಂದ ವಕ್ಕಲೆಬ್ಬಿಸುತ್ತಿದ್ದಾರೆ. ಕೇಂದ್ರ ಸರ್ಕಾರ ಜಾರಿಗೆ ತಂದಿರುವ "ಅರಣ್ಯ ಹಕ್ಕು ಕಾಯ್ದೆ–2006" ಯನ್ನು ಉಲ್ಲಘಿಸಿ ಸಾಗುವಳಿದಾರರ ಮೇಲೆ ದೌರ್ಜನ್ಯ ಹಾಗೂ ಕ್ರಿಮಿನಲ್ ದೂರು ದಾಖಲಾತಿ ಮಾಡಿ ಜೈಲಿಗೆ ಕಳುಹಿಸುತ್ತಿದ್ದಾರೆ ಇದು ತಪ್ಪಬೇಕು, ಕೇಂದ್ರ ಸರ್ಕಾರದ ಕಾಯ್ದೆಯಲ್ಲಿ 75 ವರ್ಷಗಳ ಅರಣ್ಯ ಭೂಮಿ ಸಾಗುವಳಿ ಸಾಕ್ಷಿ ದಾಖಲುಗಳನ್ನು ಒದಗಿಸಿ ಎಂಬ ನಿಯಮವಿದೆ. ಇದನ್ನು ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ಮೇಲೆ ಒತ್ತಡ ತಂದು 25 ವರ್ಷಕ್ಕೆ ಸಾಕ್ಷಿಗಳನ್ನು ನಿಗಧಿಪಡಿಸಬೇಕು ಎಂದು ಒತ್ತಾಯಿಸಲಾಯಿತು.

ರಾಜ್ಯದಲ್ಲಿ ಸರ್ಕಾರಿ ಭೂಮಿ ಮಂಜೂರಾತಿ ಸಮಿತಿಯನ್ನು ಕೂಡಲೇ ರಚಿಸಬೇಕು. ಎಲ್ಲಾ ಬಗರ್ ಹುಕುಂ ಸಾಗುವಳಿದಾರರಿಗೆ ಹಕ್ಕುಪತ್ರಗಳನ್ನು ಕೊಡಬೇಕು. ಗ್ರಾಮೀಣ ಪ್ರದೇಶದಲ್ಲಿ ಲಕ್ಷಾಂತರ ಬಡ ಕುಟುಂಬಗಳು ನಿವೇಶನಗಳಿಲ್ಲದೆ ಜೀವನ ಸಾಗಿಸುತ್ತಿದ್ದಾರೆ. ಅಂತಹ ಕುಟುಂಬಗಳಿಗೆ ನಿವೇಶನವನ್ನು ಒದಗಿಸಬೇಕು. ಹಾಗೂ ಈಗಾಗಲೇ ನಿವೇಶನವಿಲ್ಲದ ಕುಟುಂಬಗಳು ಸರ್ಕಾರಿ ಗೋಮಾಳ ಇತರೆ ಜಾಗದಲ್ಲಿ ಕಟ್ಟಿಕೊಂಡಿದ್ದಾರೆ. ಅಂತಹ ರೈತರಿಗೆ ನಿವೇಶನ ಮಂಜೂರಾತಿಯನ್ನು ನೀಡಬೇಕು ಎಂದು ಆಗ್ರಹಿಸಲಾಯಿತು.

ಈ ಪ್ರತಿಭಟನೆಯಲ್ಲಿ ಚಿತ್ರದುರ್ಗ ಜಿಲ್ಲಾ ರೈತ ಸಮಿತಿಯ ಪದಾಧಿಕಾರಿಗಳಾದ ಜಿಲ್ಲಾ ಗೌರವಾಧ್ಯಕ್ಷರಾದ ಕೋಣನೂರು ಬಸವಲಿಂಗಪ್ಪ ಜಿಲ್ಲಾ ಮಹಿಳಾ ಅಧ್ಯಕ್ಷರಾದ ಪಾಪಮ್ಮ ಎನ್.ಬಿ. ಲಿಂಗವನಾಗ್ತಿಹಳ್ಳಿ ಕಾರ್ಯದರ್ಶಿ ಶಾಂತಮ್ಮ, ಚಿಕ್ಕಬೆನ್ನೂರು ತಾಲ್ಲೂಕು ಅಧ್ಯಕ್ಷ ಅಜ್ಜಪ್ಪ ಚಿಕ್ಕಬೆನ್ನೂರು, ಜಿಲ್ಲಾ ಉಪಾಧ್ಯಕ್ಷ ಶಿವಮೂರ್ತಿ ಬೊಮ್ಮನಾಗ್ತಿಹಳ್ಳಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ. ಸೂರಪ್ಪ, ಭರಮಸಾಗರ ಸಂಚಾಲಕರು ಮೋಹನ್ ಟಿ. ಅಂಗವನಾಗ್ತಿಹಳ್ಳಿ ಭರಮಸಾಗರ ಹೋಬಳಿ ಘಟಕದ ಅಧ್ಯಕ್ಷ ಎನ್.ಟಿ. ಶಿವಣ್ಣ, ಅಂಗವನಾಗ್ತಿಹಳ್ಳಿ ಸೇರಿದಂತೆ ರೈತರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಚಿತ್ರದುರ್ಗ ಸರ್ಕಾರಿ ಬಿ.ಎಸ್ಸಿ ನರ್ಸಿಂಗ್ ಕಾಲೇಜಿಗೆ ಅತ್ಯುತ್ತಮ ಫಲಿತಾಂಶ

» ಚಿತ್ರದುರ್ಗ

2024 ಜನವರಿ ತಿಂಗಳಲ್ಲಿ ನಡೆದ ಆರ್.ಜಿ.ಯು.ಹೆಚ್.ಎಸ್ ವಿಶ್ವವಿದ್ಯಾಲಯದ ಮೊದಲನೇ ವರ್ಷದ ದ್ವಿತೀಯ ಸೆಮಿಸ್ಟರ್ ಹಾಗೂ ಎರಡನೇ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಚಿತ್ರದುರ್ಗ ಸರ್ಕಾರಿ ಬಿ.ಎಸ್ಸಿ ನರ್ಸಿಂಗ್ ಕಾಲೇಜಿಗೆ ಅತ್ಯುತ್ತಮ ಫಲಿತಾಂಶ ಲಭಿಸಿದೆ. ಮೊದಲನೇ ವರ್ಷದ ದ್ವಿತೀಯ ಸೆಮಿಸ್ಟರ್‌ನ 59 ವಿದ್ಯಾರ್ಥಿಗಳಲ್ಲಿ 58 ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿ ಹಾಗೂ ಪ್ರಥಮ ಶ್ರೇಣಿಯಲ್ಲಿ ತೇರ್ಗಡೆ ಹೊಂದಿ ಶೇ.98.30 ಫಲಿತಾಂಶ ಪಡೆದಿದ್ದಾರೆ. ದ್ವಿತೀಯ ವರ್ಷದ 59 ವಿದ್ಯಾರ್ಥಿಗಳಲ್ಲಿ 48 ವಿದ್ಯಾರ್ಥಿಗಳು 24 ಅತ್ಯುತ್ತಮ ಶ್ರೇಣಿ ಹಾಗೂ 24 ಪ್ರಥಮ ಶ್ರೇಣಿಯಲ್ಲಿ ತೇರ್ಗಡೆ ಹೊಂದಿ ಶೇ.83.35 ಫಲಿತಾಂಶ ಪಡೆದಿದ್ದಾರೆ ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ.

### ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿ: ನಾಮ ನಿರ್ದೇಶನಕ್ಕೆ ಪ್ರಸ್ತಾವನೆ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿಗೆ ಜಿಲ್ಲೆಯಲ್ಲಿ ಸರ್ವ ಸದಸ್ಯರ ಸಭೆಗೆ ಸದಸ್ಯರನ್ನು ನಾಮ ನಿರ್ದೇಶನ ಮಾಡುವ ಸಲುವಾಗಿ ಪ್ರಸ್ತಾವನೆಗಳ ಆಹ್ವಾನಿಸಲಾಗಿದೆ. ಮಾರ್ಚ್ 11 ಪ್ರಸ್ತಾವನೆ ಸಲ್ಲಿಸಲು ಕೊನೆಯ ದಿನ. ಚಿತ್ರದುರ್ಗ ಜಿಲ್ಲೆಯಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಇಬ್ಬರು ಸಮಾಜ ಸೇವಕರು, ಒಬ್ಬರು ಪರಿಶಿಷ್ಟ ಜಾತಿ/ಪಂಗಡದವರು, ಇಬ್ಬರು ಮಹಿಳಾ ಪ್ರತಿನಿಧಿಗಳು ಹಾಗೂ ಒಬ್ಬರು ಅಲ್ಪಸಂಖ್ಯಾತ ಪ್ರತಿನಿಧಿ ಅವರ ವಿವರಗಳನ್ನೊಳಗೊಂಡ ಸೂಕ್ತ ಪ್ರಸ್ತಾವನೆಯನ್ನು ಮಾರ್ಚ್ 11ರ ಸಂಜೆ 5.30 ರೊಳಗೆ ಕಾರ್ಮಿಕ ಅಧಿಕಾರಿ ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಕಾರ್ಮಿಕ ಅಧಿಕಾರಿಗಳ ಕಚೇರಿ, ಎಸ್‌ಬಿಐ ಬ್ಯಾಂಕ್ ಮೇಲ್ಭಾಗ, ಜೆ.ಸಿ.ಆರ್ ಬಡಾವಣೆ ಮುಖ್ಯ ರಸ್ತೆ, ಚಿತ್ರದುರ್ಗ ಕಚೇರಿಗೆ ಸಲ್ಲಿಸಬೇಕು ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಾರ್ಚ್ 16ರಂದು ರಾಷ್ಟ್ರೀಯ ಲೋಕ ಅದಾಲತ್

» ಚಿತ್ರದುರ್ಗ

ರಾಷ್ಟ್ರೀಯ ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಗಳ ನಿರ್ದೇಶನದಂತೆ ಮಾರ್ಚ್ 9ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿತ್ತು. ಆದರೆ ಮಾರ್ಚ್ 8ರಂದು ಶಿವರಾತ್ರಿ ಹಬ್ಬ ಇರುವುದರಿಂದ ಮಾರ್ಚ್ 9ರಂದು ನಡೆಯಬೇಕಿದ್ದ ರಾಷ್ಟ್ರೀಯ ಲೋಕ ಅದಾಲತ್‌ನ್ನು ಮಾರ್ಚ್ 16ಕ್ಕೆ ಮುಂದೂಡಲಾಗಿದೆ.

ಮಾರ್ಚ್ 16 ಶನಿವಾರದಂದು ನಡೆಯುವ ಲೋಕ ಅದಾಲತ್‌ನಲ್ಲಿ ರಾಜಿ ಸಂಧಾನಗಳ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗುವುದು. ಕಕ್ಷಿದಾರರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ನ್ಯಾ.ಸುಮಾಗೆ ನಾಯಕ ಸಮಾಜದಿಂದ ಸನ್ಮಾನ

» ಮೊದಲ ಪುಟದಿಂದ

ಸಂವಿಧಾನದಡಿ ಎಲ್ಲರಿಗೂ ಸಮಾನವಾದ ಅವಕಾಶವಿದೆ. ಬಳಸಿಕೊಂಡು ಮೇಲೆ ಬರಬೇಕು ಎಂದು ತಿಳಿಸಿದರು.ಡಾ.ಬಿ.ಆರ್. ಅಂಬೇಡ್ಕರ್‌ರವರು ನೀಡಿರುವ ಸಂವಿಧಾನ ಶೋಷಿತ ಸಮಾಜವನ್ನು ಬಡಿದೆಬ್ಬಿಸುತ್ತಿದೆ. ನ್ಯಾಯಾಧೀಶೆಯಾಗಿ ನೇಮಕಗೊಂಡಿರುವ ಟಿ.ಸುಮರವರ ಮುಂದೆ ಸಾಕಷ್ಟು ಸವಾಲುಗಳಿವೆ. ದುರ್ಬಲರು, ಶೋಷಿತರಿಗೆ ನ್ಯಾಯ ಒದಗಿಸಬೇಕು. ಘನತೆಯಿರುವ ಹುದ್ದೆಗೆ ಏರಿ ನಾಯಕ ಸಮಾಜ ಹಾಗೂ ಕೋಡೇನಹಟ್ಟಿ ಗ್ರಾಮಕ್ಕೆ ಕೀರ್ತಿ ತಂದಿದ್ದಾರೆ. ಜೀವನದಲ್ಲಿ ಇನ್ನು ಉನ್ನತ ಸ್ಥಾನಕ್ಕೆ ಏರಲಿ ಎಂದು ಶುಭ ಹಾರೈಸಿದರು.ನಾಯಕ ಸಮಾಜದ ಜಿಲ್ಲಾಧ್ಯಕ್ಷ ಹೆಚ್.ಜೆ.ಕೃಷ್ಣಮೂರ್ತಿ ಮಾತನಾಡಿ ಟಿ.ಸುಮ ನ್ಯಾಯಾಧೀಶರಾಗಿ ನೇಮಕಗೊಂಡಿರುವುದು ಕೇವಲ ನಾಯಕ ಸಮಾಜಕ್ಕಷ್ಟೆ ಅಲ್ಲ ಇಡೀ ಕೋಡೇನಹಟ್ಟಿ ಗ್ರಾಮವೇ ಖುಷಿ ಪಡುವ ವಿಚಾರ. ಎಲ್ಲರ ಆಶೀರ್ವಾದ ಅವರ ಮೇಲಿರಲಿ ಎಂದು ಹೇಳಿದರು.ನಗರಸಭೆ ಸದಸ್ಯ ವೆಂಕಟೇಶ್, ಮಾಜಿ ಸದಸ್ಯ ತಿಪ್ಪೇಸ್ವಾಮಿ, ನಾಯಕ ಸಮಾಜದ ಮುಖಂಡರುಗಳಾದ ಡಿ.ಗೋಪಾಲಸ್ವಾಮಿ ನಾಯಕ, ಮಹಂತೇಶ್, ಯುವ ನ್ಯಾಯವಾದಿ ಅಶೋಕ್‌ಬೆಳಗಟ್ಟ, ಸಣ್ಣಸ್ವಾಮಿ, ತಿಪ್ಪೇಸ್ವಾಮಿ, ಮಂಜುನಾಥ, ಚನ್ನಕೇಶವ, ಬೈಯಣ್ಣ, ಗ್ರಾಮ ಪಂಚಾಯಿತಿ ಸದಸ್ಯ ಶಿವಪ್ರಸಾದ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಮಾ.೦೯ರಂದು ಜೆ.ಜೆ. ಹಳ್ಳಿಯಲ್ಲಿ ಜನತಾ ದರ್ಶನ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಜವನಗೊಂಡನಹಳ್ಳಿ ಗ್ರಾಮದ ನಾಡಕಚೇರಿ ಹತ್ತಿರದ ಗಣೇಶ ದೇವಸ್ಥಾನದ ಆವರಣದಲ್ಲಿ ಇದೇ ಮಾರ್ಚ್ 09ರಂದು ಬೆಳಿಗ್ಗೆ 10ಕ್ಕೆ ಜಿಲ್ಲಾಮಟ್ಟದ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಪ್ರತಿ ಮಾಹೆಯಲ್ಲಿ ಜಿಲ್ಲಾಮಟ್ಟದ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಂಡು, ಜನರ ಅಹವಾಲುಗಳನ್ನು ಆಲಿಸಿ ಸಮಸ್ಯೆಗಳಿಗೆ ಪರಿಹಾರೋಪಾಯಗಳನ್ನು ಒದಗಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮವಹಿಸಲಾಗುತ್ತದೆ. ಸಾರ್ವಜನಿಕರು ಜಿಲ್ಲಾ ಮಟ್ಟದ ಜನತಾ ದರ್ಶನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ತಮ್ಮ ಅಹವಾಲುಗಳನ್ನು ಸಲ್ಲಿಸಬಹುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಕಾಪಿಯರ್ ಯಂತ್ರ ಖರೀದಿಗೆ ದರಪಟ್ಟಿ ಆಹ್ವಾನ

» ದಾವಣಗೆರೆ

ದಾವಣಗೆರೆ ನ್ಯಾಯಾಲಯ ಘಟದಲ್ಲಿ ಒಂದು ಕಾಪಿಯರ್ ಯಂತ್ರವನ್ನು ಅಳವಡಿಸಲು ಹೊರಗುತ್ತಿಗೆ ಆಧಾರ ಮೇಲೆ ಅರ್ಜಿ ಆಹ್ವಾನಿಸಲಾಗಿದೆ. ಮಾರ್ಚ್ 11 ರಂದು ಮಧ್ಯಾಹ್ನ 2 ಗಂಟೆಗೆ ನಿರೀಕ್ಷಿತ ಬಿಡ್‌ದಾರರಿಗೆ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ. ಮಾರ್ಚ್ 30 ಮಧ್ಯಾಹ್ನ 2 ಗಂಟೆಯ ಒಳಗೆ ಕೋಟೇಶನ್ ಸಲ್ಲಿಸಬಹುದು. ನಂತರ ಬಂದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ವೆಬ್ ಸೈಟ್ http://davanagere.dcourts.gov.in ವೀಕ್ಷಿಸಬಹುದು ಎಂದು ಜಿಲ್ಲಾ ಮತ್ತು ಸತ್ರ ನ್ಯಾ.ರಾಜೇಶ್ವರಿ.ಎನ್ ಹೆಗಡೆ ತಿಳಿಸಿದ್ದಾರೆ.

### ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

» ದಾವಣಗೆರೆ

ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿಯನ್ನು ಮಾರ್ಚ್ 11 ಮತ್ತು 12 ರಂದು ಆಯೋಜಿಸಲಾಗಿದೆ. ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿಗೆ ಯಾವುದೇ ಪ್ರೋತ್ಸಾಹಧನ, ಭತ್ಯೆ ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192-233787 ಸಂಪರ್ಕಿಸಲು ತಿಳಿಸಲಾಗಿದೆ.

### ಪೌರಕಾರ್ಮಿಕ ಹುದ್ದೆ ತಾತ್ಕಾಲಿಕ ಆಯ್ಕೆ ಪಟ್ಟಿ

» ದಾವಣಗೆರೆ

ದಾವಣಗೆರೆ ಮಹಾನಗರಪಾಲಿಕೆಯಿಂದ ಮಂಜೂರಾದ 119 ಸಂಖ್ಯಾತಿರಿಕ್ತ ಪೌರಕಾರ್ಮಿಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗಧಿತ ನಮೂನೆಯಲ್ಲಿ ಅರ್ಜಿಯನ್ನು ಆಹ್ವಾನಿಸಲಾಗಿತ್ತು. ಈ ಪೈಕಿ ಅರ್ಹತೆ ಹೊಂದಿರುವ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಾವಣಗೆರೆ ಮಹಾನಗರಪಾಲಿಕೆಯ ವೆಬ್‌ಸೈಟ್ www.davanagerecity.mrc.ರಂತ.ಟಿ ನಲ್ಲಿಪ್ರಕಟಿಸಲಾಗಿದೆ. ಈ ಆಯ್ಕೆ ಪಟ್ಟಿಯಿಂದ ಬಾಧಿತರಾಗುವ ಅಭ್ಯರ್ಥಿಗಳು ತಮ್ಮ ಆಕ್ಷೇಪಣೆಗಳಿದ್ದಲ್ಲಿ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಿದ 15 ದಿನಗಳೊಗಾಗಿ ಆಯುಕ್ತರ ಕಚೇರಿ, ಮಹಾನಗರಪಾಲಿಕೆ ದಾವಣಗೆರೆ ಇಲ್ಲಿಗೆ ಸಲ್ಲಿಸಬಹುದು.

# ಜಾತಿಯಿಂದ ಗುರುತಿಸದೆ ಗುಣದಿಂದ ಗುರುತಿಸಿ

» ಚಿತ್ರದುರ್ಗ


ಇಂದಿನ ದಿನಮಾನದಲ್ಲಿ ಮಾನವನನ್ನು ಜಾತಿಯಿಂದ ಗುರುತಿಸದೆ ಆತನ ಗುಣದಿಂದ ಗುರುತಿಸುವ ಕೆಲಸವಾಗಬೇಕು. ಜಾತಿಯನ್ನು ನಾವು ಮಾಡಿಕೊಂಡಿದ್ದು ಗುಣ ದೇವರು ನೀಡಿದ್ದು ಎಂದು ವಿಹಿಂಪನ ದಕ್ಷಿಣ ಪ್ರಾಂತದ ವಿಶೇಷ ಸಂಪರ್ಕ ಪ್ರಮುಖ್ ಮಂಜುನಾಥ್ ಸ್ವಾಮಿ ತಿಳಿಸಿದರು.

ನಗರದ ಶ್ರೀ ಕಬೀರಾನಂದಾಶ್ರಮದ ವತಿಯಿಂದ ಶ್ರೀಮಠದ ಆವರಣದಲ್ಲಿ ನಿರ್ಮಿತವಾಗಿರುವ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಮಹಾ ಮಂಟಪದಲ್ಲಿ ನಡೆಯುತ್ತಿರುವ 94ನೇ ಮಹಾ ಶಿವರಾತ್ರಿ ಮಹೋತ್ಸವದ ಎರಡನೇ ದಿನದಂದು ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಾಮಾಜಿಕ ಸಾಮರಸ್ಯವನ್ನು ಜಾಗೃತಿ ಮೂಡಿಸುವ ವಾತಾವರಣ ಇದಾಗಿದೆ. ಭಗವಂತನಿಗೆ ಯಾವುದೇ ರೀತಿಯ ಜಾತಿಯ ಸೂಂಕು ಇಲ್ಲ, ಆತನಿಗೆ ನಿರ್ಮಲವಾದ ಭಕ್ತಿ ಮಾತ್ರ ಮುಖ್ಯವಾಗಿದೆ. ಸಿದ್ದಾರೂಢ ಸಂಪ್ರಾದಾಯ ಜನತೆಯನ್ನು ಮೇಲೆತ್ತುವ ಸಂಪ್ರದಾಯವಾಗಿದೆ. ಜಾತಿ, ಮೇಲು ಕೀಲು, ಅಸ್ಪೃಶ್ಯತೆ ಸಮಾಜದ ಕಳಂಕವಾಗಿದೆ. ಇದನ್ನು ತೆಗೆಯವ ಸಂಬಂಧ ನೂರಾರು ಜನ ಕೆಲಸವನ್ನು ಮಾಡಿದ್ದಾರೆ ಎಂದರು.

ದೇವರನ್ನು ಜಾತಿಗೆ ಹೊಲಿಸುವುದು ಸರಿಯಲ್ಲ, ಶ್ರೀರಾಮ ಕ್ಷತ್ರೀಯ, ಕೃಷ್ಣ ಗೊಲ್ಲ ಸಮುದಾಯದವನು, ರಾಮಾಯಣ ಬರದೆ ವಾಲ್ಮೀಕಿ ನಾಯಕ ಜನಾಂಗದವರು ಆದರೆ ಅವರು ಮಾಡುದ ಕೆಲಸಗಳು ಮಾತ್ರ ಎಲ್ಲರಿಗೂ ಅನ್ವಯವಾಗುವಂತಹದಾಗಿದೆ. ಆರಾಧನೆಯಲ್ಲಿ ಜಾತಿಗಿಂತ ಗುಣ ಮುಖ್ಯವಾಗಿದೆ. ಮಾನವ ಗುಣವನ್ನು ಅರಿತು ಆರಾಧಿಸುವುದು ಅಗತ್ಯವಾಗಿದೆ. ಸಂಸ್ಕೃತ ಭಾಷೆ ಸಮಾಜದ ಭಾಷೆಯಾಗಿದೆ. ಇದರಲ್ಲಿ 1 ಲಕ್ಷ ಶೋಕ್ಲಗಳು ಇವೆ ಎಂದು ತಿಳಿಸಿದರು.

ಹನುವಂತನಿಗೆ ಗುಣದಿಂದ ಅತನಿಗೆ



ರಾಮಾಯಣದಲ್ಲಿ ಪ್ರಾತಿನಿಧ್ಯವನ್ನು ನೀಡಲಾಯಿತು ಜಾತಿಯಿಂದಲ್ಲ, ಜಾತಿಯಿಂದ ವ್ಯಕ್ತಿಯನ್ನು ನೋಡಬಾರದು ಆತನ ಗುಣದಿಂದ ಆತನನ್ನು ನೋಡಬೇಕಿದೆ. ಮಾನವ ಜಾತಿಯಿಂದ ಮಹಾನೀಯನಾಗದೆ ಗುಣದಿಂದ ಮಹಾನೀಯನಾಗಬೇಕಿದೆ. ಇಂದಿನ ದಿನಮಾನದಲ್ಲಿ ಧರ್ಮವನ್ನು ಉಳಿಸುವ ಅಗತ್ಯ ಎಲ್ಲಡೆ ಇದೆ. ಧರ್ಮದ ಕಡೆ ಜನತೆಯನ್ನು ವಾಲಿಸಬೇಕಿದೆ. ನಾವು ಬೇರೆಯವರಿಗೆ ಮಾಡುವ ನಮಸ್ಕಾರದಲ್ಲಿ ಚಮತ್ಕಾರ ಇದೆ ಆದರೆ ವಿದೇಶಿ ಸಂಪ್ರದಾಯದ ಕೈಕುಲುಕುವಲ್ಲಿ ಇಲ್ಲ ಎಂದರು. ನಮ್ಮದು ಶ್ರೇಷ್ಠವಾದ ಸಂಸ್ಕೃತಿಯಾಗಿದೆ ಇದರ ಆರಾಧನೆಯಲ್ಲಿ ಕೀಳಿರಿಮೆಯನ್ನು ತೋರಬಾರದು, ಮಕ್ಕಳಿಗೆ ನಮ್ಮ ರಾಜ ಮಹಾರಾಜ ಶೌರ್ಯ, ಪರಾಕ್ರಮದ ಬಗ್ಗೆ ತಾಯಂದಿರು ತಿಳಿಸುವ ಕಾರ್ಯವನ್ನು ಮಾಡಬೇಕಿದೆ. ಧರ್ಮ ಮತ್ತು ಸಂಸ್ಕೃತಿ ಉಳಿಯಬೇಕಾದರೆ ಇಂತಹ ಕಾರ್ಯಕ್ರಮಗಳಿಗೆ ನಾವು ಬರಬೇಕು ನಮ್ಮ ಮಕ್ಕಳನ್ನು ಕರೆತರಬೇಕಿದೆ ನಮ್ಮಲ್ಲಿನ ಸಣ್ಣ-ಸಣ್ಣ ಆಚರಣೆಗಳನ್ನು ನಾವು ಸರಿಯಾದ ರೀತಿಯಲ್ಲಿ ನೋಡಬೇಕಿದೆ ಎಂದು ತಿಳಿಸಿದರು.

ಬೀದರ್‌ನ ಮುಚಳಾಂಬದ ಶ್ರೀ ನಾಗಭೂಷಣ ಮಠದ ಶ್ರೀ ಪ್ರಣವಾನಂದ ಶ್ರೀಗಳು ಮಮಕಾರದಿಂದ ಮಿಕ್ಕಿನ ಬಂಧ ಉಂಟೆ ಎಂಬ ವಿಷಯದ ಬಗ್ಗೆ ಮಾತನಾಡಿ, ಮಮಕಾರ ಬಂಧನವು ಕಷ್ಟ-ಸುಖಗಳನ್ನು ತರುವಂತ ಬಂಧನವಾಗಿದೆ. ಮಾನವ ಬದುಕಿನಲ್ಲಿ ನಿಜವಾದ ಮಮಕಾರ ಮೋಹ ಸಂಸಾರದಲ್ಲಿ ತರುತ್ತದೆ. ಕಷ್ಟ ಬಂದಾಗ ಮಾತ್ರ ನಿಜವಾದ ಬಂಧುಗಳು ಕಾಣುತ್ತಾರೆ. ಸಂಸಾರ ವಿಭೀನ್ನವಾಗಿದೆ ಇಲ್ಲಿ ಯಾರಿಗೂ ಯಾರೂ ಇಲ್ಲವಾಗಿದೆ. ನಿಜವಾದ ಬಂಧು ಎಂದರೆ ಪರಮಾತ್ಮ ಮಾತ್ರ, ಆದಾಯವನ್ನು ಗಳಿಸುವಾಗ ಮಾತ್ರ ಮನೆಯಲ್ಲಿ ಎಲ್ಲರು ಪ್ರೀತಿಯಿಂದ ನೋಡುತ್ತಾರೆ ಆದಾಯ ಗಳಿಸದಿದ್ದಾಗ ಎಲ್ಲರು ಗದರಿಸುತ್ತಾರೆ. ಸಂಬಂಧಗಳು ಮಾನವ ಬದುಕಿನಲ್ಲಿ ನೋವನ್ನು ಉಂಟು ಮಾಡುತ್ತವೆ ಎಂದರು. ಮಾಜಿ ಸಚಿವ ಹೆಚ್.ಆಂಜನೇಯ ಮಾತನಾಡಿ, ನಗರದ ಕಬೀರಾನಂದಾಶ್ರಮವತಿಯಿಂದ ನಡೆಯುತ್ತಿರುವ ಶಿವನಾಮ ಸಪ್ತಾಹ ಕಾರ್ಯಕ್ರಮವೂ ವರ್ಷದಿಂದ ವರ್ಷಕ್ಕೆ ವಿಜೃಂಭೀಸುತ್ತಿದೆ. ಆರ್ಥಿಕ ಸಹಾಯ ಜಾತಿಯ ಸೂಂಕು ಇಲ್ಲದ ಜಾತ್ಯಾತೀತ ಮಠವಾದ ಕಬೀರಾನಂಧ ಆಶ್ರಮ ಎಲ್ಲರನ್ನು ಸಹಾ ಪ್ರೀತೀಸುತ್ತದೆ. ನೊಂದವರ ಕಣ್ಣೀರನ್ನು ಒರೆಸುವ ಕಾರ್ಯವನ್ನು ಶ್ರೀಗಳು ಮಾಡುತ್ತಿದ್ದಾರೆ. ಮಠದ ಪ್ರಗತಿಯಲ್ಲಿ ಅದಿ ಚುಂಚನಗಿರಿಯ ಶ್ರೀ ಬಾಲಗಂಗಾಧರನಾಥ ಶ್ರೀಗಳು ಸಹಾಯ ಅಪಾರವಾಗಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ, ಕಬೀರಾನಂದಾಶ್ರಮ ಉತ್ತಮವಾದ ಕಾರ್ಯವನ್ನು ಮಾಡುತ್ತಿದೆ. ಮಕ್ಕಳಿಗೆ ಶಿಕ್ಷಣ, ವೃದ್ದಾಶ್ರಮ ಗೋವುಗಳ ಸಂರಕ್ಷಣೆಯನ್ನು ಮಾಡುವುದರ ಮೂಲಕ ಸಮಾಜಮುಖಿಯಾದ ಕೆಲಸವನ್ನು ಮಾಡುತ್ತಿದೆ. ಇದ್ದಲ್ಲದೆ ಮಠಕ್ಕೆ ಸಹಾಯವನ್ನು ಮಾಡಿದವರನ್ನು ಗುರುತಿಸಿ ಅವರನ್ನು ಗೌರವಿಸುವ ಕಾರ್ಯವನ್ನು ಮಾಡುತ್ತಿರುವುದು ಶ್ಲಾಘನೀಯವಾದದು, ಶಿವರಾತ್ರಿ ಸಪ್ತಾಹವನ್ನು ಮಾಡುವುದರ ಮೂಲಕ ಭಕ್ತರಿಗೆ ಭಕ್ತಿಯಲ್ಲಿ ತೇಲುವಂತ ಕಾರ್ಯವನ್ನು ಮಾಡುತ್ತಿದೆ ಎಂದರು.

ಕಾರ್ಯಕ್ರಮಕ್ಕೂ ಮುನ್ನಾ ಶ್ರೀ ಕ್ಷೇತ್ರ ಅದಿಚುಂಚನಗಿರಿ ಮಹಾಸಂಸ್ಥಾನದ ಪೀಠಾಧ್ಯಕ್ಷರಾದ ಶ್ರೀ ಡಾ.ನಿರ್ಮಲಾನಂದ ಶ್ರೀಗಳು, ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಪ್ರಸನ್ನನಾಥ ಶ್ರೀಗಳು, ಶ್ರೀ ಶಿವಶರಣ ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಶ್ರೀಗಳು ಶ್ರೀ ಸದ್ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಶ್ರೀಗಳು ದೀಪವನ್ನು ಬೆಳಗುವುದರ ಮೂಲಕ ಎರಡನೇ ದಿನದ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಕೆಪಿಸಿಸಿ ಸಂಯೋಜಕರಾದ ಕುಮಾರಗೌಡ, ಮಹಾರಾಷ್ಟ್ರದ ಸಂಗಧರಿಯ ಗುರುನಾಥ್ ಮಹಾರಾಜ್, ದಾವಣಗೆರೆ ಜಿ.ಪಂ. ಮಾಜಿ ಅಧ್ಯಕ್ಷರಾದ ವೈ.ರಾಮ್ಮಪ, 94ನೇ ಮಹಾ ಶಿವರಾತ್ರಿ ಸಪ್ತಾಹದ ಅಧ್ಯಕ್ಷರಾದ ಕೆ.ಸಿ.ನಾಗರಾಜು, ಉಪಾಧ್ಯಕ್ಷರಾದ ಸಿದ್ದವ್ವನಹಳ್ಳಿಯ ಪರಮೇಶ್, ವಿಜಯಕುಮಾರ್, ಕಸಾಪ ಅಧ್ಯಕ್ಷರಾದ ಶಿವಸ್ವಾಮಿ, ಭಾಗವಹಿಸಿದ್ದರು. ಸುಬ್ರಾಯ್ ಭಟ್ರು ವೇದ ಘೋಷ ಮಾಡಿದರೆ, ನಾಗರಾಜ್ ಸಂಗಮ್ ಸ್ವಾಗತಿಸಿದರು. ಶ್ರೀಮತಿ ಜಯ ಪ್ರಾಣೇಶ್ ಕಾರ್ಯಕ್ರಮ ನಿರೂಪಿಸಿದರು.ಶ್ರೀ ಗೀತಾಗಾಯನ ಗಾನಯೋಗಿ ಸಂಗೀತ ಬಳಗದ ತೋಟಪ್ಪ ಉತ್ತಂಗೆ ಶ್ರೀಮತಿ ಕೋಕಿಲ ಇವರಿಂದ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಶ್ರೀ ವಾರಿ ಭಜನಾ ಮಂಡಳಿಯ ಶ್ರೀಮತಿ ಸತ್ಯಪ್ರಭಾ ವಸಂತ್ ಕುಮಾರ್ ತಂಡದಿಂದ ಭಜನಾ ಕಾರ್ಯಕ್ರಮ ನಡೆಯಿತು.

# ಸಾಮಾಜಿಕ ಭದ್ರತಾ ಯೋಜನೆ, ಅಂಚೆಯಿಂದ ಸಕಾಲದಲ್ಲಿ ಮಾಸಾಶನ ತಲುಪಿಸಲು ಸೂಚನೆ

» ದಾವಣಗೆರೆ

ಸಾಮಾಜಿಕ ಭದ್ರತಾ ಯೋಜನೆಗಳಾದ ಸಂಧ್ಯಾಸುರಕ್ಷಾ, ವೃದ್ದಾಪ್ಯ, ವಿಧವಾ, ಅಂಗವಿಕಲರ ಮಾಸಾಶನ ಸೇರಿದಂತೆ ಇನ್ನಿತರೆ ಮಾಸಾಶನಗಳನ್ನು ಅಂಚೆ ಇಲಾಖೆಯಿಂದ ನಿಗದಿತ ಸಮಯಕ್ಕೆ ತಲುಪಿಸಬೇಕೆಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಸೂಚನೆ ನೀಡಿದರು.ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಅಂಚೆ ಇಲಾಖೆ ಅಧಿಕಾರಿಗಳು ಹಾಗೂ ಸಾಮಾಜಿಕ ಭದ್ರತಾ ಯೋಜನೆ ಅನುಷ್ಠಾನಾಧಿಕಾರಿಗಳ ಸಭೆಯಲ್ಲಿ ಮಾತನಾಡಿದರು. ಪ್ರತಿ ತಿಂಗಳು ಸಾಮಾಜಿಕ ಭದ್ರತಾ ಯೋಜನೆ ಮಾಸಾಶನ ಸಕಾಲದಲ್ಲಿ ತಲುಪದ ಕಾರಣ ವಯೋವೃದ್ದರಿಗೆ ಜೀವನ ನಿರ್ವಹಣೆ ಹಾಗೂ ದಿನನಿತ್ಯದ ಖರ್ಚುವೆಚ್ಚಗಳಿಗೆ ಸಮಸ್ಯೆಯಾಗಿದೆ ಎಂದು ಹಲವು ಮಾಸಾಶನ ಫಲಾನುಭವಿಗಳು ದೂರು ನೀಡಿದ್ದರು.

ಅಂಚೆ ಇಲಾಖೆಯಿಂದ ಮಾಸಾಶನಗಳು ಸಕಾಲದಲ್ಲಿ ವಿತರಣೆಯಾಗಿದೆಯೇ ಇಲ್ಲವೋ ಎಂಬ ಬಗ್ಗೆ ಪರಿಶೀಲನೆ ನಡೆಸಬೇಕು. ಮಾಸಾಶನದ ಮಾಹಿತಿ ಕೇಳಲು ಬರುವವರಿಗೆ ಅಂಚೆ ಕಚೇರಿಯಲ್ಲಿ ಸೌಜನ್ಯತೆಯಿಂದ ವರ್ತನೆ ಮಾಡುವ ಜೊತೆಗೆ ಅವರ ಖಾತೆಯಲ್ಲಿ ಹಣ ಜಮಾ ಆಗಿರುವ ಬಗ್ಗೆ ನಿಖರ ಮಾಹಿತಿಯನ್ನು ನೀಡಬೇಕು. ಕೆಲವೊಂದು ವೇಳೆ ಅಂಚೆ ಇಲಾಖೆ ನೌಕರರು ವಿತರಣೆಯ ವೇಳೆ ವಿಳಂಬ ಮಾಡುವ



ಸಂಭವವಿದ್ದು ಇದನ್ನು ಪೋಸ್ಟ್ ಮಾಸ್ಟರ್ ಪ್ರತಿನಿತ್ಯ ಪರಿಶೀಲನೆ ಮಾಡಿಕೊಳ್ಳಬೇಕೆಂದು ತಿಳಿಸಿ ಮುಂದಿನ ದಿನಗಳಲ್ಲಿ ಸರ್ಕಾರದಿಂದ ಜಮಾ ಮಾಡಿದ್ದರೂ ಮಾಸಾಶನ ತಲುಪದಿದ್ದಲ್ಲಿ ಅಂತಹ ಸಿಬ್ಬಂದಿಯ ಮೇಲೆ ಶಿಸ್ತುಕ್ರಮ ಕೈಗೊಳ್ಳುವ ಎಚ್ಚರಿಕೆ ನೀಡಿದರು.

ಮಾಸಾಶನ ಪಾವತಿಯ ಹಂತಗಳು; ಅಂಚೆ ಮೂಲಕ ಪಡೆಯುತ್ತಿರುವ ಸಾಮಾಜಿಕ ಭದ್ರತಾ ಮಾಸಾಶನವು ಆಧಾರ್ ಬೇಸ್ಡ್ ಡಿಬಿಟಿ ಮೂಲಕ ನೇರವಾಗಿ ಅವರ ಖಾತೆಗೆ ಜಮಾ ಮಾಡಲಾಗುತ್ತದೆ. ಅಂಚೆ ಕಚೇರಿಯಲ್ಲಿ ಉಳಿತಾಯ ಖಾತೆ ಮತ್ತು ಇಂಡಿಯಾ ಪೋಸ್ಟ್ ಪೇಮೆಂಟ್ ಬ್ಯಾಂಕ್ ಖಾತೆ ಇರುತ್ತದೆ. ಅಂಚೆ ಎಸ್.ಬಿ.ಖಾತೆಯಿಂದ ಮಾಸಾಶನ ಪಾವತಿಗೆ ಅವರ ಮನೆ ಬಾಗಿಲಲ್ಲಿ ಪಾವತಿಸಲು ಹಿಂಪಡೆಯುವ ನಮೂನೆಗೆ ಸಹಿ ಮತ್ತು ಇದಕ್ಕೆ ಗೆಜಿಟೆಡ್ ಅಧಿಕಾರಿಗಳ ಸಹಿ, ಸಾಕ್ಷಿಗಳ ಸಹಿ ಪಡೆದು ಮನೆ ಬಾಗಿಲಲ್ಲಿ ವಿತರಣೆ ಮಾಡಲಾಗುತ್ತದೆ.

ಮತ್ತು ಇಂಡಿಯಾ ಪೋಸ್ಟ್ ಪೇಮೆಂಟ್ ವ್ಯವಸ್ಥೆಯಡಿ ಅಂಚೆ ಕಚೇರಿಯಲ್ಲಿ ಹಾಗೂ ಮನೆ ಬಾಗಿಲಲ್ಲಿ ಬಯೋಮೆಟ್ರಿಕ್ ಮೂಲಕ ಅಂಚೆಯಣ್ಣ ಪಾವತಿಸುವರು. ಮಾಸಾಶನ ಸರ್ಕಾರದಿಂದ ಅವರ ಖಾತೆಗೆ ಜಮೆಯಾದ ಬಗ್ಗೆ ಅವರು ನೀಡಿರುವ ಮೊಬೈಲ್‌ಗೆ ಮೆಸೇಜ್ ಹೋಗುತ್ತದೆ. ಫಲಾನುಭವಿಗಳು ಬಯೋಮೆಟ್ರಿಕ್ ನೀಡುವಾಗ ಮತ್ತು ವಿತ್‌ಡ್ರಾ ನಮೂನೆಗೆ ಸಹಿ ಮಾಡುವಾಗ ಖಾತರಿ ಮಾಡಿಕೊಳ್ಳಬೇಕಾಗುತ್ತದೆ. ಸಭೆಯಲ್ಲಿ ಅಂಚೆ ಅಧೀಕ್ಷಕರಾದ ಚಂದ್ರಶೇಖರ್, ಸಾಮಾಜಿಕ ಭದ್ರತಾ ಯೋಜನೆ ಸಹಾಯಕ ನಿರ್ದೇಶಕರಾದ ಪುಷ್ಪಾ ಹಾಗೂ ಅಂಚೆ ಇಲಾಖೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಾದಾರ ಚನ್ನಯ್ಯ ಸ್ವಾಮೀಜಿ ಪೀಠ ತ್ಯಜಿಸಿ ಹೊರ ಬರಲಿ



» ಚಿತ್ರದುರ್ಗ

ಬುದ್ಧ, ಬಸವ, ಅಂಬೇಡ್ಕರ್ ವಿಚಾರಗಳಿಗೆ ತದ್ವಿರುದ್ದವಾಗಿ ನಡೆದುಕೊಳ್ಳುತ್ತಿರುವ ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಪೀಠ ತ್ಯಜಿಸಿ ಹೊರ ಬರಬೇಕು ಎಂದು ಸಾಮಾಜಿಕ ಸಂಘರ್ಷ ಸಮಿತಿ ರಾಜ್ಯಾಧ್ಯಕ್ಷ ಪ್ರೊ.ಸಿ.ಕೆ. ಮಹೇಶ್ ಎಚ್ಚರಿಕೆ ನೀಡಿದರು. ಪ್ರವಾಸಿ ಮಂದಿರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಈ ಕುರಿತು ಮಾದಿಗರ ಸಾಂಸ್ಕೃತಿಕ ಸಂಘ, ಜನಾಂಗದ ಸಾಂಸ್ಕೃತಿಕ ನೆಲೆಗಳು-ಮುಕ್ತ ಸಂವಾದ ಮಾ. 10 ರಂದು ಬೆಳಿಗ್ಗೆ ಹನ್ನೊಂದು ಗಂಟೆಗೆ ಪತ್ರಕರ್ತರ ಭವನದಲ್ಲಿ ನಡೆಯಲಿದೆ ಎಂದು ಹೇಳಿದರು. ಮಾದಿಗರ ಆಶಯಗಳಿಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿರುವ ಬಸವಮೂರ್ತಿ ಮಾದಾರ ಚನ್ನಯ್ಯಸ್ವಾಮೀಜಿ ಕಳೆದ ಹತ್ತಾರು ವರ್ಷಗಳಿಂದಲೂ ಮಠದಲ್ಲಿ ಆರ್.ಎಸ್.ಎಸ್. ಬೈಠೆಕ್ ನಡೆಸುತ್ತ, ಬ್ರಾಹ್ಮಣ್ಯ ಆಲೋಚನೆಗಳನ್ನು ಮೈಗೂಡಿಸಿಕೊಂಡು ಬುದ್ದನ, ವಚನಗಾರರ, ಮಾದಾರ ಚನ್ನಯ್ಯ, ಮರುಳಸಿದ್ದನ ಚಿಂತನೆಗಳಿಗೆ ಅಪಚಾರವೆಸಗುತ್ತಿದ್ದಾರೆ. ಮಾದಿಗರಿಗೂ ಮಠಕ್ಕೂ ಸಂಬಂಧವಿಲ್ಲವೆನ್ನುವಂತಾಗಿದೆ. ಮಾದಿಗರ ಮೇಲಾಗುವ ಅನ್ಯಾಯ, ದಬ್ಬಾಳಿಕೆ, ದೌರ್ಜನ್ಯ, ಅತ್ಯಾಚಾರ, ಹಲ್ಲೆ, ಬಹಿಷ್ಕಾರಗಳಿಗೆ ಒಂದು ದಿನವೂ ಬೀದಿಗೆ ಬಂದು ಹೋರಾಡಲಿಲ್ಲ. ಮಠ ಕೈಬಿಟ್ಟು ಜನಾಂಗವನ್ನು ರಕ್ಷಿಸಬೇಕಿದೆ. ಮೇಲ್ವರ್ಗದವರಿಗೆ ಕೇಂದ್ರ ಸರ್ಕಾರ ಶೇ.10 ರಷ್ಟು ಮೀಸಲಾತಿಯನ್ನು ಕೊಟ್ಟಾಗಲು ಹೊರಗೆ ಬಂದು ಮಾದಿಗರ ಪರವಾಗಿ ಚರ್ಚಿಸಲಿಲ್ಲ.

## ಪ್ರಮುಖ ಸುದ್ದಿ

### ಪ್ಲಾಸ್ಟಿಕ್ ಮಲ್ಚಿಂಗ್ ಪೇಪರ್ ತ್ಯಾಜ್ಯದಿಂದ ಪರಿಸರ-ಜಾನುವಾರುಗಳ ಜತೆ ಸವಾರರಿಗೂ ಕಂಟಕ

# ಕಟಾವಿನ ಬಳಿಕ ರಸ್ತೆ ಇಕ್ಕೆಗಳಲ್ಲಿ ಎಸೆತ; ನಿರ್ವಹಣೆಗೆ ಅಗ್ರಹ

» ಮಹದೇವಪುರ ಶಿವಮೂರ್ತಿ

ವಿಶೇಷ ವರದಿ

ಪರಶುರಾಂಪುರ: ಪ್ಲಾಸ್ಟಿಕ್ ಮಲ್ಚಿಂಗ್ ಮಾಡಿ ಬೆಳೆ ಬೆಳೆಯುವ ರೈತರು ಬಳಿಕ ಪ್ಲಾಸ್ಟಿಕ್ ತ್ಯಾಜ್ಯವನ್ನ ರಸ್ತೆ ಪಕ್ಕ ಎಲ್ಲೆಂದರಲ್ಲಿ ಎಸೆಯುತ್ತಿದ್ದು, ಇದರಿಂದ ಜಾನುವಾರುಗಳಿಗೆ ಕಂಟಕವಾಗುತ್ತಿದೆ. ಇದರ ನಿವ9ಹಣೆಗೆ ವಿಶೇಷ ಯೋಜನೆ ರೂಪಿಸುವಂತೆ ತೋಟಗಾರಿಕೆ ಇಲಾಖೆಗೆ ಪರಿಸರವಾದಿಗಳು ಆಗ್ರಹಿಸುತ್ತಿದ್ದಾರೆ.

ಹೋಬಳಿಯ ವಿವಿಧೆಡೆ ಹಲವು ಬೆಳೆಗಳನ್ನ ನಾಟಿ ಮಾಡಿದ ತಕ್ಷಣ ಬೆಳೆಯನ್ನ ಕೀಟ, ರೋಗ ಬಾಧೆ ಹಾಗೂ ಕಸ ಮುಕ್ತವಾಗಿಸಲು ಅವುಗಳ ಸುತ್ತಲೂ ಪ್ಲಾಸ್ಟಿಕ್ ಮಲ್ಚಿಂಗ್ ಪೇಪರ್ ಮಾಡುತ್ತಾರೆ.

ಬೆಳೆ ಕಟಾವು ನಂತರ ಪ್ಲಾಸ್ಟಿಕ್ ತ್ಯಾಜ್ಯವನ್ನ ಹೊಲದ ಅಕ್ಕಪಕ್ಕ ಇಲ್ಲವೆ ರಸ್ತೆ ಇಕ್ಕೆಲಗಳಲ್ಲಿ ಎಸೆಯುತ್ತಿದ್ದಾರೆ.

ಈ ಪ್ಲಾಸ್ಟಿಕ್ ಸೇವಿಸಿ ಪ್ರಾಣಿ- ಪಕ್ಷಿ,ದನ-ಕರುಗಳು ಸೇವಿಸಿ ಅಸ್ವಸ್ಥಗೊಳ್ಳುತ್ತಿರುವುದು ಅಲ್ಲಲ್ಲಿ ಕಂಡು ಬರುವುದರ ಜತೆಗೆ ಪರಿಸರವು ಕಲುಷಿತವಾಗುತ್ತಿದೆ.



**ಬೆಳೆಗಾರರಿಗೆ ಲಾಭ-ನಿರ್ವಹಣೆ ಕೊರತೆಯಿಂದ ಪರಿಸರ ಜತೆ ಜಾನುವಾರುಗಳಿಗೆ ಆಪತ್ತು:** ಪರಶುರಾಂಪುರ ಹೋಬಳಿಯ ಪುರ್ಲಹಳ್ಳಿಯ ಚಳ್ಳಕೆರೆ ರಸ್ತೆ, ಬಸವೇಶ್ವರ ಕಾಲೋನಿ ,ಪಾವಗಡ,ಜಾಜೂರು,ಧರ್ಮಪುರ ಮಾರ್ಗಗಳ ರಸ್ತೆ ಅಕ್ಕಪಕ್ಕ ಸೇರಿದಂತೆ ಇನ್ನಿತರರೆ ಕಡೆಗಳಲ್ಲಿ ಬಹುತೇಕವಾಗಿ ತ್ಯಾಜ್ಯವಾಗಿ ಬಿದ್ದಿರುವ ಪ್ಲಾಸ್ಟಿಕ್ ಮಲ್ಚಿಂಗ್ ಪೇಪರ್ ಕಾಣಬಹುದು.ಮುಂಗಾರು-ಹಿಂಗಾರು ಮಳೆ ಬೆಳೆಯಿಲ್ಲದೆ ಬರದ ಛಾಯೆ ಆವರಿಸಿ ಚಳ್ಳಕೆರೆಯನ್ನ ಬರಪೀಡಿತ ತಾಲೂಕಾಗಿದೆ ಈ ನಿಟ್ಟಿನಲ್ಲಿ ಜಾನುವಾರುಗಳಿಗೆ ಗೋಶಾಲೆಯು ಆರಂಭವಾಗಿದೆ.ಆದರೆ ಮಳೆ ಇಲ್ಲದೆ ಕೆರೆ ಕಟ್ಟೆಗಳೂ ನೀರಿಗಾಗಿ ಬಾಯ್ತೆರಿದಿವೆ. ಆಗಾಗಿ ಬೆಳೆಯ ಲಾಭಕ್ಕೆ ಬಳಸಿದ ಮಲ್ಚಿಂಗ್ ಪೇಪರ್ ಸರಿಯಾದ ರೀತಿಯಲ್ಲಿ ನಿರ್ವಹಣೆ ಆಗದಿದ್ದರೆ ಪರಿಸರ ಜತೆ ಜಾನುವಾರುಗಳಿಗೂ ಆಪತ್ತು ಕಟ್ಟಿಟ್ಟ ಬುತ್ತಿ ಎಂದು ಪರಿಸರ ಪ್ರೇಮಿಗಳು ಹೇಳುವರು.

**ಸವಾರರಿಗೂ ಕಂಟಕವಾದ ಮಲ್ಚಿಂಗ್ ಪೇಪರ್:** ತ್ಯಾಜ್ಯವಾದ ಪ್ಲಾಸ್ಟಿಂಕ್ ಮಲ್ಚಿಂಗ್ ಪೇಪರ್‌ನ್ನ ರಸ್ತೆ ಅಕ್ಕಪಕ್ಕದಲ್ಲಿ ಬೇಲಿಗಳಲ್ಲಿ ಎಸೆದು ಕೈ ತೊಳೆದುಕೊಳ್ಳವುರು.ಇದು ಗಾಳಿಗೆ ಹಾರಾಡುತ್ತಾ ರಸ್ತೆಯಲ್ಲಿ ಚಲಿಸುವ ಸವಾರರಿಗೆ ಭಯ ಹುಟ್ಟಿಸುತ್ತಿದೆ.ಇದಕ್ಕೆ ಸಂಬಂದಿಸಿದಂತೆ ತಿಪ್ಪರೆಡ್ಡಿಹಳ್ಳಿ ಮಾರ್ಗದಲ್ಲಿ ಆಂಧ್ರ ಮೂಲದ ಬೈಕ್ ಸವಾರಿನಿಗೆ ರಾತ್ರಿ ಸಮಯದಲ್ಲಿ ಗಾಳಿಗೆ ಮಲ್ಚಿಂಗ್ ಪೇಪರ್ ತೇಲಿಕೊಂಡು ಅಡ್ಡಬಂದ ಪರಿಣಾಮ ಸವಾರ ಎದುರಿಕೊಂಡು ಬೈಕ್‌ನಲ್ಲಿ ಬಿದ್ದು ಕೈಕಾಲು ಮುರಿದುಕೊಂಡ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಘಟನೆಯನ್ನ ಆಂಧ್ರದ ಮಂಜುನಾಥರೆಡ್ಡಿ ಪತ್ರಿಕೆಗೆ ತಿಳಿಸಿದ್ದಾರೆ.

ಕೋನಿಗರಹಳ್ಳಿ ಮಾರ್ಗದಲ್ಲಿ ಮಲ್ಚಿಂಗ್ ಪೇಪರ್ ಗಾಳಿಗೆ ಕಾರಿನ ಗ್ಲಾಜಿಗೆ ಅಡ್ಡಬಿದ್ದ ಪರಿಣಾಮ ಕಾರು ಪಲ್ಟಿಯಾಗಿ ಬಿದ್ದು ಸಣ್ಣಪುಟ್ಟ ಪೆಟ್ಟುಗಳೊಂದಿಗೆ ದೊಡ್ಡ ಅನಾಹುತ ತಪ್ಪಿದಂತಾಗಿದೆ ಎಂದು ಕಾರು ಚಾಲಕ ನರಸಿಂಹರಾಜು ತಿಳಿಸಿದರು.

**ಕಡಿವಾಣಕ್ಕೆ ಪ್ರಜ್ಞಾವಂತರ ಆಗ್ರಹ:** ಕೃಷಿ ಕಾರ್ಮಿಕರು ಕೊರತೆಯಿಂದ ಹಲವು ಗಿಡಗಳು ಮದ್ಯೆ ಬೆಳೆಯುವ ಕಸದ ನಿಯಂತ್ರಣಕ್ಕಾಗಿ ಪ್ಲಾಸ್ಟಿಕ್ ಮಲ್ಚಿಂಗ್ ಪೇಪರ್ ಮೊರೆಹೋಗುತ್ತಿದ್ದಾರೆ.ಆದರೆ ಬೆಳೆ ಬೆಳೆದ ನಂತರ ರೈತರು ಈ ಪ್ಲಾಸ್ಟಿಕ್ ತ್ಯಾಜ್ಯವನ್ನ ಸಮರ್ಪಕವಾಗಿ ವಿಲೇವಾರಿ ಮಾಡುತ್ತಿಲ್ಲ, ರಸ್ತೆಗಳ ಅಕ್ಕಪಕ್ಕ ಇಂತಹ ತ್ಯಾಜ್ಯ ತುಂಬಿತುಳುಕುತ್ತಿದೆ.ಸಂಬಂಧ ಪಟ್ಟವರು ಇದಕ್ಕೆ ಕಡಿವಾಣ ಹಾಕಬೇಕೆಂದು ಪ್ರಜ್ಞಾವಂತ ನಾಗರಿಕರು ಒತ್ತಾಯಿಸುತ್ತಿದ್ದಾರೆ.

## ಫಾಸ್ಟ್ ನ್ಯೂಸ್

### ಗೃಹ ರಕ್ಷಕದಳ ನೇಮಕಾತಿ ದೈಹಿಕ ಪರೀಕ್ಷೆ ಮಾ.೯ ರಂದು

» ದಾವಣಗೆರೆ

ದಾವಣಗೆರೆ ಜಿಲ್ಲಾ ಗೃಹರಕ್ಷಕ ದಳದಲ್ಲಿ ವಿವಿಧ ತಾಲ್ಲೂಕು ಮತ್ತು ಉಪ ಘಟಕಗಳಲ್ಲಿ ಖಾಲಿ ಇರುವ 69 ಗೃಹರಕ್ಷಕದಳ ನೇಮಕಾತಿಗೆ ದೈಹಿಕ ಪರೀಕ್ಷೆಯನ್ನು ಮಾ. 9 ರಂದು ಮಧ್ಯಾಹ್ನ 2.00 ಗಂಟೆಗೆ ಜಿಲ್ಲಾ ಪೊಲೀಸ್ ಸಶಸ್ತ್ರ ಮೀಸಲು ಪಡೆ ಕವಾಯತು ಮೈದಾನದಲ್ಲಿ (ಡಿ.ಎ.ಆರ್.) ನಡೆಯಲಿದೆ ಎಂದು ಪೊಲೀಸ್ ಅಧೀಕ್ಷಕರು ಹಾಗೂ ಗೃಹರಕ್ಷಕದಳ ಆಯ್ಕೆ ಸಮಿತಿ ಅಧ್ಯಕ್ಷರು ತಿಳಿಸಿದ್ದಾರೆ.

### ಕೊಬ್ಬರಿ ಖರೀದಿ : ನೋಂದಣಿಯಾಗದ ಹೆಸರು ಸಪ್ಪೆಮೊರೆಯಲ್ಲಿ ಮನೆಗೆ ತೆರಳಿದ ರೈತರು



» ಹೊಸದುರ್ಗ

ಸರ್ಕಾರ ಕೊಬ್ಬರಿ ಖರೀದಿ ನೋಂದಣಿಗೆ ಸೋಮವಾರದಿಂದ ಅವಕಾಶ ಕಲ್ಪಿಸಿದೆ. ಕೊನೆಯ ದಿನ ನಿಗದಿಪಡಿಸದ ಕಾರಣ ನಿತ್ಯ ನೋಂದಣಿಗೆ ಬರುವ ರೈತರ ಸಂಖ್ಯೆ ಹೆಚ್ಚಾಗುತ್ತಿದೆ. ಕೆಲ ರೈತರು ದಿನಂ ಪ್ರತಿ ಬೆಳ್ಳಿಗ್ಗೆಯಿಂದಲೇ ಕಾಯುತ್ತಿದ್ದು, ಕೊನೆಗೂ ನೋಂದಣಿಯಾಗದಿರುವುದಕ್ಕೆ ಬೇಸರದಿಂದ ನಡೆದರು. ನಿತ್ಯ ಬೆಳ್ಳಿಗ್ಗೆ 8 ರಿಂದ ಸಂಜೆ 6 ಗಂಟೆಯವರೆಗೂ ನೋಂದಣಿ ನಡೆಯುತ್ತಿದೆ. ಬುಧವಾರವೂ ಸಹ ಎಂದಿನಂತೆ ನೋಂದಣಿ ಕಾರ್ಯ ನಡೆಯಿತು. ಸರದಿ ಸಾಲಿನಲ್ಲಿ ನಿಂತ ರೈತರು, ನೋಂದಣಿಗಾಗಿ ಸಹನೆಯಿಂದ ಬಿಸಲನ್ನು ಲೆಕ್ಕಿಸದೆ ಕಾಯುತ್ತಿದ್ದರು. ಕೊಬ್ಬರಿ ಖರೀದಿ ಕೇಂದ್ರದಿಂದ ಎಪಿಎಂಸಿ ಮುಖ್ಯ ಕಚೇರಿವರೆಗೂ ರೈತರು ಸಾಲಿನಲ್ಲಿ ನಿಂತಿದ್ದರು. ಮಂಗಳವಾರದವರೆಗೂ 450 ಜನ ರೈತರ ನೋಂದಣಿಯಾಗಿದೆ.**ಟೋಕನ್ ವ್ಯವಸ್ಥೆ ಜಾರಿ :** ನಿತ್ಯ ರೈತರ ನೂಕು ನುಗ್ಗಲು ಹೆಚ್ಚಾದ ಹಿನ್ನಲೆಯಲ್ಲಿ ಖರೀದಿ ಅಧಿಕಾರಿಗಳು ಟೋಕನ್ ನೀಡುವ ವ್ಯವಸ್ಥೆ ಆರಂಭಿಸಿದ್ದಾರೆ. ದಿನಕ್ಕೆ 300 ಕ್ಕೂ ಅಧಿಕ ಜನರಿಗೆ ಟೋಕನ್ ಕಲ್ಪಿಸಲಾಗುತ್ತಿದೆ. ಟೋಕನ್ ಅನ್ವಯ ರೈತರು ಮರುದಿನ ಬಂದು ನೋಂದಣಿ ಮಾಡಿಸಿಕೊಳ್ಳುವ ವ್ಯವಸ್ಥೆ ಕಲ್ಪಿಸಲಾಗಿದೆ. ಹಿರಿಯೂರಿನಲ್ಲಿ ಕೊಬ್ಬರಿ ಖರೀದಿಗೆ ನೋಂದಣಿ ಮಾಡಿಸಬಹುದೆಂದು ತಿಳಿದು, ಮಂಗಳವಾರ ನಸುಕಿನಲ್ಲೇ ಹಿರಿಯೂರಿಗೆ ಹೋಗಿದ್ದೆ, ಅಲ್ಲಿ ಕೇವಲ ಹಿರಿಯೂರು ರೈತರನ್ನು ಮಾತ್ರ ನೋಂದಾಯಿಸಲಾಗುವುದೆಂಬ ಮಾಹಿತಿ ನೀಡಿದರು. ಪುನಃ 6 ಗಂಟೆಗೆ ಬಂದು ಹೊಸದುರ್ಗದ ನೋಂದಣಿ ಕೇಂದ್ರದ ಎದುರು ನಿಂತಿದ್ದೇವೆ. ಸಂಜೆ 6 ಗಂಟೆಯಾದರೂ ನೋಂದಣಿಯಾಗಿಲ್ಲ. ಟೋಕನ್ ಆದರೂ ಪಡೆದು ಮನೆಗೆ ಹೋದರಾಯಿತು ಎಂದು ಬಹುತೇಕ ರೈತರು ಬೇಸರದಿಂದ ಮಾತನಾಡಿಕೊಳ್ಳುತ್ತಿದ್ದರು. ಸಾಕಷ್ಟು ರೈತರು ಮಂಗಳವಾರ ರಾತ್ರಿಯಿಂದಲೇ ಖರೀದಿ ಕೇಂದ್ರದಲ್ಲಿ ಇದ್ದಾರೆ ರಾತ್ರಿ ಸೊಳ್ಳೆಗಳ ಕಾಟ, ಊಟದ ಸಮಸ್ಯೆ ಹೀಗೆ ಹತ್ತಾರು ಸಮಸ್ಯೆಗಳಿದ್ದರೂ, ನೋಂದಣಿ ಮಾಡಿಸುವಂತಹ ಅನಿವಾರ್ಯತೆಯಿದೆ. ರೈತರು ನಿತ್ಯ ಸಮಸ್ಯೆಗಳ ಸುರಿಮಳೆಯಲ್ಲೇ ಬದುಕುವಂತಾಗಿದೆ. ಇಲಾಖೆಯವರು ಕೊನೆಯ ದಿನ ನಿಗದಿಪಡಿಸಿಲ್ಲ, ಮನೆ ಮುಂದೆ ಸಾವಿರಾರು ಕೊಬ್ಬರಿ ಸುಲಿಸಿ ರಾಶಿ ಹಾಕಲಾಗಿದೆ. ಅವುಗಳ ಮಾರಾಟದ ಹೊಣೆ ನಮ್ಮ ಮೇಲಿದೆ. ಮಾರುಕಟ್ಟೆಯಲ್ಲಿ ಮಾರಾಟ ಮಾಡೋಣವೆಂದರೆ, ಮನಸ್ಸಿಗೆ ತೋಚಿದ ಆಗೆ ಬೆಲೆ ನಿಗದಿ ಮಾಡುತ್ತಾರೆ. ರೈತ ಏನೇ ಬೆಳೆದರೂ ಸಂಕಷ್ಟ ಮಾತ್ರ ತಪ್ಪಿಲ್ಲ ಎಂದು ರೈತರು ನೋವಿನಲ್ಲಿ ಮಾತನಾಡಿದರು. –ಈ ಬಾರಿ ಬೆರಳಚ್ಚು ನೀಡುವ ಹೊಸ ಪದ್ಧತಿ ಸೇರಿಸಲಾಗಿದೆ. ಹಲವು ಜಮೀನುಗಳು ಮನೆಯ ಹಿರಿಯರ ಹೆಸರಿನಲ್ಲಿವೆ. ಅವರಿಗೆ ವಯಸ್ಸಾಗಿರುವ ಕಾರಣ ಕೆಲವರ ಬೆರಳಚ್ಚು ಪಡೆಯಲಾಗುತ್ತಿಲ್ಲ. ನೂಕು ನುಗ್ಗಲು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಜಿಲ್ಲಾಧಿಕಾರಿಗಳು ಹಾಗೂ ತಹಶೀಲ್ದಾರ್ ಈ ಬಗ್ಗೆ ಗಮನಹರಿಸಿ ಹೋಬಳಿಗೊಂದು ಖರೀದಿ ಕೇಂದ್ರ ನೀಡಿದರೆ ಅನುಕೂಲವಾಗುತ್ತದೆ ಎನ್ನುತ್ತಾರೆ ರೈತರು

### ಅರೋಗ್ಯವಂತ ಸಮಾಜ ನಿರ್ಮಾಣಕ್ಕಾಗಿ ಪಲ್ಸ್ ಪೋಲಿಯೋ ಕಾರ್ಯಕ್ರಮ

» ಹೊಸದುರ್ಗ

ಅರೋಗ್ಯವಂತ ಸಮಾಜ ನಿರ್ಮಾಣಕ್ಕಾಗಿ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಂಡಿದ್ದು ಎಲ್ಲರೂ ಇದರ ಸದುಪಯೋಗಪಡೆದುಕೊಳ್ಳುವಂತೆ ಕಾಂಗ್ರೆಸ್ ನ ಯುವ ಮುಖಂಡ ಬಿಜಿ ಅರುಣ್ ಹೇಳಿದರು. ತಾಲೂಕಿನ ಶ್ರೀರಾಂಪುರದ ಸಮುದಾಯ ಅರೋಗ್ಯ ಕೇಂದ್ರದಲ್ಲಿ ಆಯೋಜಿಸಲಾಗಿದ್ದ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಮಗುವಿಗೆ ಪೋಲಿಯೋ ಹನಿ ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದರು.ಇಂದಿನ ಮಕ್ಕಳೇ ಮುಂದಿನ ಪ್ರಜೆಗಳಾಗಿರುವ ಕಾರಣ ಭವಿಷ್ಯದಲ್ಲಿ ಅರೋಗ್ಯವಂತ ಹಾಗೂ ಸದೃಢ ಸಮಾಜ ನಿರ್ಮಾಣ ಮಾಡಲು ಚಿಕ್ಕ ಮಕ್ಕಳಲ್ಲಿ ರೋಗ ನಿರೋಧಕ ಶಕ್ತಿ ತುಂಬ ಬೇಕಿದೆ ಎಂದರು.

### ಶಿಕ್ಷಣಕ್ಕೆ ಮಡಿವಾಳ ಸಮಾಜ ಮೊದಲ ಆದ್ಯತೆ ನೀಡಿ: ಸ್ವಾಮೀಜಿ

# ರಾಜಕೀಯ ಪ್ರಾಶಸ್ತ್ಯ ಪಡೆಯಲು ಸಂಘಟನೆ ಅಗತ್ಯ

» ಚಳ್ಳಕೆರೆ

ಶೈಕ್ಷಣಿಕ, ಸಾಮಾಜಿಕ, ಆರ್ಥಿಕ, ರಾಜಕೀಯವಾಗಿ ಮಡಿವಾಳ ಸಮಾಜ ಬಲಗೊಳ್ಳಲು ಸಂಘಟನೆ ಅಗತ್ಯವಿದೆ. ರಾಜಕೀಯ ಇಚ್ಛಾಶಕ್ತಿ ಕೊರತೆಯಿಂದ ಎಸ್ಸಿ ಮೀಸಲಾತಿ ದೊರೆಯದೆ, ಸಮಾಜ ಅಗತ್ಯ ಸೌಲಭ್ಯಗಳಿಂದ ವಂಚಿತವಾಗಿದೆ ಎಂದು ಚಿತ್ರದುರ್ಗ ಮಡಿವಾಳ ಮಾಚಿದೇವ ಸಂಸ್ಥಾನಮಠದ ಜಗದ್ಗುರು ಡಾ.ಬಸವಮಡಿವಾಳ ಮಾಚಿದೇವಮಹಾಸ್ವಾಮಿ ಹೇಳಿದರು.

ಅವರು ನಗರದ ವಾಸವಿ ಮಹಲ್ ನಲ್ಲಿ ಬುಧವಾರ ತಾಲ್ಲೂಕು ಮಡಿವಾಳ ಸಂಘ, ಯುವಕ ಸಂಘ, ಸರ್ಕಾರಿ ನೌಕರರ ಸಂಘ, ಮಹಿಳಾ ಸಂಘ, ಯುವವೇದಿಕೆ ಸಂಯುಕ್ತಾಶ್ರದಲ್ಲಿ ಆಯೋಜಿಸಿದ್ದ ಮಡಿವಾಳ ಮಾಚಿದೇವ ಜನಜಾಗೃತಿ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು. ಕಳೆದ ಸುಮಾರು ವರ್ಷಗಳಿಂದ ಮಡಿವಾಳ ಸಮಾಜ ಸೂಕ್ತ ಪ್ರಾತಿನಿಧ್ಯಕ್ಕಾಗಿ ಹೋರಾಟ ನಡೆಸುತ್ತಲೇ ಬಂದಿದ್ದೇವೆ ಆದರೆ ಇದುವರೆಗೂ ಯಾವುದೇ ಸ್ಥಾನಮಾನ ಸಿಕ್ಕಿಲ್ಲ. ಸೌಲಭ್ಯ ಪಡೆಯಲು ಸಮುದಾಯ ಮೊದಲು ಸಂಘಟಿತರಾಗಿ, ನಂತರ ಮಕ್ಕಳಿಗೆ ಶಿಕ್ಷಣ ಕೊಡಿಸುವತ್ತ ಮುಂದಾಗಬೇಕು. ಸಂಸ್ಕೃತಿ, ಸಂಪ್ರದಾಯ, ಮೃದುಸ್ವಭಾವದ ಮಡಿವಾಳ ಸಮಾಜಕ್ಕೆ ರಾಜಕೀಯ ಶಕ್ತಿ ಬೇಕಿದೆ. ಹಲವಾರು ಪಕ್ಷಗಳು ಅಧಿಕಾರಕ್ಕೆ ಬಂದರೂ ನಮಗೆ ಸೂಕ್ತ ಸ್ಥಾನ ಸಿಗಲಿಲ್ಲವೆಂದು ಬೇಸರ ವ್ಯಕ್ತಪಡಿಸಿದರು.






ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಸಣ್ಣ ಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ, ಶಾಸಕ ಟಿ.ರಘುಮೂರ್ತಿ ಮಾತನಾಡಿ, ಮಡಿವಾಳ ಸಮಾಜಕ್ಕೆ ರಾಜಕೀಯ ಪ್ರಾಶಸ್ತ್ಯ ಅಗತ್ಯವಿದೆ. ಮೂಲಸೌಲಭ್ಯಗಳಿಂದ ವಂಚಿತವಾದ ಮಡಿವಾಳ ಸಮಾಜ ಮೊದಲು ಶಿಕ್ಷಣ ಮತ್ತು ಸಂಘಟನೆಯಿಂದ ಬಲಗೊಳ್ಳಬೇಕು. ಬಸವಮಡಿವಾಳ ಮಾಚಿದೇವ ಸ್ವಾಮೀಜಿ ಸಮಾಜದ ಏಳಿಗಾಗಿ ಇಡೀ ರಾಜ್ಯವನ್ನೆ ಪ್ರವಾಸ ಮಾಡಿ ಸಂಘಟನೆ ಮಾಡುತ್ತಿದ್ದಾರೆ. ಇದಕ್ಕೆ ನಾನು ಕೈಜೋಡಿಸುವೆ. ನನ್ನ ಕ್ಷೇತ್ರದಲ್ಲಿ ಮಡಿವಾಳಸಮಾಜಕ್ಕೆ ಅಗತ್ಯ ಸೌಲಭ್ಯ ಕೊಡುವುದಾಗಿ ಭರವಸೆ ನೀಡಿದರು.

ಮಡಿವಾಳ ಸಮಾಜದ ರಾಜ್ಯಾಧ್ಯಕ್ಷ ಸಿ.ನಂಜಪ್ಪ ಮಾತನಾಡಿ, ಸಮಾಜಕ್ಕೆ ಸೌಲಭ್ಯ ಪಡೆಯುವ ನಿಟ್ಟಿನಲ್ಲಿ ತಲತಲಾಂತರದಿಂದಲ್ಲೂ ಹೋರಾಟ ಮಾಡುತ್ತಲ್ಲೇ ಬಂದಿದ್ದೇವೆ. ಆದರೂ ಯಾವ ರಾಜಕೀಯ ಪಕ್ಷಗಳು ಸೌಲಭ್ಯ ಕುರಿತಂತೆ ಚಿಂತಿಸದೆ, ಕೇವಲ ಮತಬ್ಯಾಂಕಾಗಿ ಮಾತ್ರ ನೋಡಿವೆ. ಉತ್ತರಕರ್ನಾಟಕದಲ್ಲಿ ಇಂದಿಗೂ ನಮ್ಮ ಸಮುದಾಯ ಶೋಚನೀಯಸ್ಥಿತಿ ಬದುಕು ನಡೆಸುತ್ತಿದೆ. ರಾಷ್ಟದ18ರಾಜ್ಯಗಳಲ್ಲಿ ನಮ್ಮ ಸಮಾಜವನ್ನು ಎಸ್ಸಿ ಪಟ್ಟಿಗೆ ಸೇರಿಸಿ ಸೌಲಭ್ಯ ನೀಡಲಾಗುತ್ತಿದೆ. ಆದರೆ, ಕರ್ನಾಟಕದಲ್ಲಿ ಇದು ಸಾಧ್ಯವಾಗುತ್ತಿಲ್ಲ. ಅನ್ನಪೂರ್ಣಮ್ಮ ವರದಿ ಜಾರಿ ಮಾಡಿ, ಎಸ್ಸಿ ಪಟ್ಟಿಗೆ ಸೇರ್ಪಡೆಗೆ ರಾಜಕಾರಣಿಗಳೇ ಅಡ್ಡಿಪಡಿಸುತ್ತಿರುವುದು ದುರದೃಷ್ಟಕರ ಎಂದರು.

ತಾಲ್ಲೂಕು ಅಧ್ಯಕ್ಷ ಬುಡ್ನಹಟ್ಟಿ ಎಂ.ನಾಗರಾಜು ಮಾತನಾಡಿ, ಮಡಿವಾಳ ಸಮಾಜಕ್ಕೆ ಎಸ್ಸಿ ಪಟ್ಟಿಗೆ ಸೇರ್ಪಡೆ ಮಾಡಬೇಕು, ರಾಜಕೀಯ ಪ್ರಾತಿನಿಧ್ಯ ಕಲ್ಪಿಸಬೇಕು, ನಿಗಮಕ್ಕೆ ಹೆಚ್ಚಿನ ಆರ್ಥಿಕ ನೆರವು ನೀಡಬೇಕು, ಸಮಾಜದ ಅಭಿವೃದ್ಧಿ ನಿವೇಶನ, ಆರ್ಥಿಕ ಸಹಾಯ ಮಾಡಬೇಕು, ಮಡಿವಾಳ ಮಹಿಳಾ ಸ್ವಸಹಾಯ ಗುಂಪುಗಳಿಗೆ ಹೆಚ್ಚು ಅನುದಾನ ನೀಡಬೇಕು, ಗಂಗಾ ಕಲ್ಯಾಣ ಯೋಜನೆ, ದೊಬಿಘಾಟ್ ನಿರ್ಮಾಣ, ಪ್ರತ್ಯೇಕ ವಸತಿ ಯೋಜನೆ ನೀಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಜೀವನ ಕೌಶಲ್ಯ ತರಬೇತುದಾರ ಜೆ.ಸಿ.ರಾಜಶೇಖರ್ ಉಪನ್ಯಾಸ ನೀಡಿದರು. ಜಿಲ್ಲಾಧ್ಯಕ್ಷ ಬಿ.ರಾಮಪ್ಪ, ತಾಲ್ಲೂಕು ಗೌರವಾಧ್ಯಕ್ಷ ಎನ್. ಮಂಜುನಾಥ, ಯುವ ಘಟಕದ ಅಧ್ಯಕ್ಷ ಕರೀಕೆರೆನಾಗರಾಜು, ಮುಂತಾದವರು ಮಾತನಾಡಿದರು. ಮಾಚಿಪ್ರಭುಈರಣ್ಣ, ಆರ್.ರವಿಕುಮಾರ್, ಯನ್ನಪ್ಪ, ಬಿ.ಸಿ. ಕುಶಾಲಪ್ಪ, ಆರ್ಟ್ ಸನ್ ಪ್ರಕಾಶ್, ಡಿ.ಮೃನಾಕುಮಾರ್, ಪಗಡಲಬಂಡೆ ನಾಗೇಂದ್ರಪ್ಪ, ಎಂ.ಎನ್.ಮೃತ್ಯುಂಜಯ, ಓಂಕಾರಪ್ಪ, ಎಂ.ಹಿದಾಯಿತವುಲ್ಲಾ, ಎ.ಮಂಜುನಾಥ, ಶೈಲಜಾ, ಪದ್ಮಾವತಿ, ಭವ್ಯ, ವೇದಮೂರ್ತಿ ಉಪಸ್ಥಿತರಿದ್ದರು.

# ಚಿತ್ರದುರ್ಗ ಕುಡಿಯುವ ನೀರಿನ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ: ಕೆ.ಸಿ.ವೀರೇಂದ್ರ ಪಪ್ಪಿ

» ಚಿತ್ರದುರ್ಗ

ಬೇಸಿಗೆ ಕಾಲವಿರುವುದರಿಂದ, ಚಿತ್ರದುರ್ಗ ನಗರಸಭೆ ವ್ಯಾಪ್ತಿಯಲ್ಲಿ 15ನೇ ಹಣಕಾಸು ಯೋಜನೆಯಡಿ ಕುಡಿಯುವ ನೀರಿಗಾಗಿ ಮೀಸಲಿಟ್ಟ ಅನುದಾನದ ಕಾಮಗಾರಿಗಳನ್ನು ತುರ್ತಾಗಿ ಪೂರ್ಣಗೊಳಿಸುವಂತೆ ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ಸೂಚನೆ ನೀಡಿದರು.

ಕುಡಿಯುವ ನೀರು ಪೂರೈಕೆ ಕುರಿತಂತೆ ನಗರಸಭೆಯ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.ಬೇಸಿಗೆ ಕಾಲ ಪ್ರಾರಂಭವಾಗಿರುವುದರಿಂದ ಚಿತ್ರದುರ್ಗ ನಗರಕ್ಕೆ ಶಾಂತಿ ಸಾಗರ, ವಿ.ವಿ.ಸಾಗರ, ಬೋರ್‌ವೆಲ್‌ಗಳ ಮೂಲಕ ಕುಡಿಯುವ ನೀರು ಪೂರೈಕೆ ಮಾಡುವ ಸಂಬಂಧ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಚರ್ಚೆ ನಡೆಸಲಾಯಿತು.

ಶಾಸಕ ವೀರೇಂದ್ರ ಪಪ್ಪಿ ಅವರು ಮಾತನಾಡಿ, ಚಿತ್ರದುರ್ಗ ನಗರದ ವಾರ್ಡ್ ನಂ. 01 ರಿಂದ 35 ರಲ್ಲಿ ಕುಡಿಯುವ ನೀರು ಪೂರೈಕೆ ಮಾಡುತ್ತಿರುವ ವಾಲ್ವ್‌ಮ್ಯಾನ್‌ಗಳು ತಮಗೆ ವಹಿಸಿದ ವಾರ್ಡ್‌ಗಳಲ್ಲಿ ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಿ, ಸಾಧ್ಯವಾದಷ್ಟು ಉತ್ತಮ ರೀತಿಯಲ್ಲಿ ಕುಡಿಯುವ ನೀರನ್ನು ಪೂರೈಕೆ ಮಾಡುವಂತೆ ಸಲಹೆ ನೀಡಿದರು.



ನೀರಿನ ಅಭಾವವಿರುವ ಕಡೆಗಳಲ್ಲಿ ಬೋರ್‌ವೆಲ್‌ಗಳನ್ನು ಕೊರೆಯಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು. ನಗರಸಭೆಯ ಆರ್.ಓ. ಪ್ಲಾಂಟ್‌ಗಳನ್ನುಚಾಲನೆಗೆಕೊಟ್ಟುಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು ಪೂರೈಕೆಗೆ ಅನುಕೂಲ ಕಲ್ಪಿಸುವಂತೆ ಸೂಚಿಸಿದರು. 15ನೇ ಹಣಕಾಸು ಯೋಜನೆಯಡಿಕುಡಿಯುವನೀರಿಗಾಗಿಮೀಸಲಿಟ್ಟ ಅನುದಾನದ ಕಾಮಗಾರಿಗಳನ್ನು ತುರ್ತಾಗಿ ಅನುಷ್ಟಾನಗೊಳಿಸಬೇಕು. ಇ–ಆಸ್ತಿಗಳನ್ನು ಹಾಗೂ ಜನನ–ಮರಣ ಪ್ರಮಾಣ ಪತ್ರಗಳನ್ನು ನಿಗದಿತ ಅವಧಿಯೊಳಗೆ ಸಾರ್ವಜನಿಕರಿಗೆ ತಲುಪುವ ವ್ಯವಸ್ಥೆ ಮಾಡಬೇಕು ಎಂದರು. ನಗರ ವ್ಯಾಪ್ತಿಯ ಒಳಚರಂಡಿ ಯೋಜನೆ ಕುರಿತು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯೊಂದಿಗೆ ಚರ್ಚಿಸಿ, ಪೂರ್ಣ ಯೋಜನೆಯ ಕುರಿತು ಮತ್ತೊಮ್ಮೆ ಪಿ.ಪಿ.ಟಿ ಮತ್ತು ಸ್ಥಳಗಳ ವೀಕ್ಷಣೆ ಮಾಡಿ, ಆಗಿರುವ ಲೋಪದೋಷಗಳನ್ನು ಸರಿಪಡಿಸುವ ಕ್ರಮ ವಹಿಸುವುದಾಗಿ ತಿಳಿಸಿದರು. ಸಭೆಯಲ್ಲಿ ಪೌರಾಯುಕ್ತೆ ರೇಣುಕಾ.ಎಂ, ಸಹಾಯಕ ಕಾರ್ಯಪಾಲಕ ಅಭಿಯಂತರ ರಾಜು, ಸೇರಿದಂತೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಕಾರ್ಯಪಾಲಕ ಅಭಿಯಂತರರು ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ಕಚೇರಿಯ ಸಿಬ್ಬಂದಿ ವರ್ಗದವರು ಹಾಜರಿದ್ದರು.

### ಮೋದಿ ಪ್ರಧಾನಿಯಾದಾಗಿನಿಂದಲೂ ಅಘೋಷಿತ ತುರ್ತು ಪರಿಸ್ಥಿತಿ




» ಚಿತ್ರದುರ್ಗ

ಕಾರ್ಪೊರೇಟ್, ಬಂಡವಾಳಶಾಹಿಗಳ ಪರವಾಗಿರುವ ಕೇಂದ್ರ ಬಿಜೆಪಿ.ಸರ್ಕಾರವನ್ನು ಈ ಬಾರಿಯ ಪಾರ್ಲಿಮೆಂಟ್ ಚುನಾವಣೆಯಲ್ಲಿ ಕಿತ್ತೊಗೆಯಬೇಕೆಂದು ರೈತ ನಾಯಕ ಬಡಗಲಪುರ ನಾಗೇಂದ್ರ ರೈತ ಕುಲಕ್ಕೆ ಕರೆ ನೀಡಿದರು.

ರೋಟರಿ ಬಾಲ ಭವನದ ಮುಂಭಾಗ ಬುಧವಾರ ಹಮ್ಮಿಕೊಳ್ಳಲಾಗಿದ್ದ ರಾಜ್ಯ ಮಟ್ಟದ ರೈತ ಕಾರ್ಮಿಕ ಪಂಚಾಯತ್‌ನಲ್ಲಿ ಭಾಗವಹಿಸಿ ಮಾತನಾಡಿದರು.

ದೆಹಲಿಯಲ್ಲಿ ಹದಿಮೂರು ತಿಂಗಳುಗಳ ಕಾಲ ರೈತರು ನಡೆಸಿದ ಚಳುವಳಿಯಲ್ಲಿ ರೈತರ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ನೀಡುವುದಾಗಿ ಭರವಸೆ ಕೊಟ್ಟ ಪ್ರಧಾನಿ ಮೋದಿ ಇನ್ನು ಬೆಲೆ ನಿಗಧಿಪಡಿಸಿಲ್ಲ. ನರೇಗಾ ಯೋಜನೆಯಡಿ ನೂರು ದಿನಗಳ ಕಾಲ ಉದ್ಯೋಗ ಕೊಡಬೇಕು. ಮನುಷ್ಯತ್ವವಿಲ್ಲದ ಕೇಂದ್ರ ಸರ್ಕಾರದಿಂದ ಯುವಕರಿಗೆ, ರೈತರಿಗೆ, ಕಾರ್ಮಿಕರಿಗೆ, ಮೋಸವಾಗುತ್ತಿದೆ. ಜನಸಾಮಾನ್ಯರ ಬದುಕನ್ನೆ ಕಿತ್ತುಕೊಳ್ಳುತ್ತಿರುವ ಕೇಂದ್ರ ಸರ್ಕಾರದಿಂದ ಇಂಡಿಯಾ ಉಳಿಯಲ್ಲ. ಮಾ.14 ರಂದು ನವದೆಹಲಿಯ ರಾಮಲೀಲಾ ಮೈದಾನದಲ್ಲಿ ನಡೆಯುವ ಮಹತ್ವದ ಸಭೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಎಂದು ಮನವಿ ಮಾಡಿದರು.

ಸಾಮಾಜಿಕ ಪರಿವರ್ತನಾ ಸಂಸ್ಥೆ ಅಧ್ಯಕ್ಷ ಎಸ್.ಆರ್.ಹಿರೇಮಠ್ ಮಾತನಾಡಿ ನರೇಂದ್ರಮೋದಿ ದೇಶದ ಪ್ರಧಾನಿಯಾದಾಗಿನಿಂದಲೂ ಅಘೋಷಿತ ತುರ್ತು ಪರಿಸ್ಥಿತಿಯಿರುವುದರಿಂದ ಗಂಭೀರವಾದ ಗಂಡಾಂತರಗಳನ್ನು ಎದುರಿಸುವಂತಾಗಿದೆ. ರೈತರು, ಕಾರ್ಮಿಕರು, ಶ್ರಮಿಕ ವರ್ಗದವರು ಪರಿತಪಿಸುತ್ತಿದ್ದಾರೆ. ದುಡಿಯುವ ಕೈಗಳಿಗೆ ಕನಿಷ್ಠ ವೇತನ ಸಿಗುತ್ತಿಲ್ಲ. ಇದೆ ತಿಂಗಳ ಹದಿನಾಲ್ಕರಂದು ದೆಹಲಿಯ ರಾಮಲೀಲಾ ಮೈದಾನದಲ್ಲಿ ನಡೆಯುವ ಮಹತ್ವದ ಸಭೆಯಲ್ಲಿ ಅನೇಕ ತೀರ್ಮಾನಗಳನ್ನು ಕೈಗೊಳ್ಳಲಾಗುವುದು. ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಿ ಎಂದು ತಿಳಿಸಿದರು.



### ವೀರೇಶ್‌ಗೆ ಸನ್ಮಾನ

**ಚಿತ್ರದುರ್ಗ:** ಮೈಸೂರು ವಿಶ್ವವಿದ್ಯಾನಿಲಯದಿಂದ ಗೌರವ ಡಾಕ್ಟರೇಟ್ ಪಡೆದಿರುವ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಕೆ.ಎಂ.ವೀರೇಶ್‌ರವರಿಗೆ ಜಿಲ್ಲಾ ಶಿವಸಿಂಪಿ ಘಟಕ ಮತ್ತು ಮಹಿಳಾ ಘಟಕದವತಿಯಿಂದ ಶಾಲು ಹಾರವನ್ನು ಹಾಕುವುದರ ಮೂಲಕ ಗೌರವಿಸಲಾಯಿತು.

## ಪ್ರಮುಖ ಸುದ್ದಿ

### ನಗರಂಗೆರೆ ಗ್ರಾ.ಪಂ ಆಡಳಿತದಿಂದ ಅಭಿವೃದ್ಧಿಯತ್ತ ದಾಪುಗಾಲು

# ಸುಮಾರು 38 ಲಕ್ಷದ ಉಳಿತಾಯ ಬಜೆಟ್ ಮಂಡನೆ

» ಚಳ್ಳಕೆರೆ

ತಾಲ್ಲೂಕಿನ 40 ಗ್ರಾಮ ಪಂಚಾಯಿತಿಗಳಲ್ಲಿ ಉತ್ತಮ ವಹಿವಾಟು ಹೊಂದಿರುವ ನಗರಂಗೆರೆ ಗ್ರಾಮ ಪಂಚಾಯಿತಿ ಪ್ರಸ್ತುತ ವರ್ಷದ 2024–25ನೇ ಸಾಲಿನ ಆಯವ್ಯಯವನ್ನು ಗ್ರಾಮ ಪಂಚಾಯಿತಿ ಅಧ್ಯಕ್ಷೆ ನಾಗವೇಣಿ ಮಂಡಿಸಿ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಹಾಗೂ ಎಲ್ಲಾ ಪಂಚಾಯಿತಿ ಸದಸ್ಯರು ಹಾಜರಿದ್ದು, ಆಯವ್ಯಯ ಮಂಡನೆ ಬಗ್ಗೆ ಸಂತೃಪ್ತಿ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಧ್ಯಕ್ಷೆ ನಾಗವೇಣಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಕುರಿತು ಪಕ್ಷಬೇದ ಮರೆತು ಎಲ್ಲರೂ ಸಹಕಾರ ನೀಡಿದ್ದಾರೆ. ಗ್ರಾಮ ಪಂಚಾಯಿತಿಯ ಆದಾಯ ಮಟ್ಟವನ್ನು ಹೆಚ್ಚಿಸಬೇಕಿದೆ. ಈ ಹಿನ್ನೆಲೆಯಲ್ಲಿ ಎಲ್ಲಾ ಸದಸ್ಯರ ಅಭಿಪ್ರಾಯ ಪಡೆದು ಆಯವ್ಯಯವನ್ನು ಮಂಡಿಸಲಾಗಿದೆ. ಆಯವ್ಯಯ ಮಂಡಿಸಲು ಅವಕಾಶ ಕಲ್ಪಿಸಿದ ಉಪಾಧ್ಯಕ್ಷ, ಸದಸ್ಯರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗವನ್ನು ಅವರು ಅಭಿನಂದಿಸಿದರು.




ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಂ.ರಾಮಚಂದ್ರಪ್ಪ ಮಾತನಾಡಿ, ಗ್ರಾಮ ಪಂಚಾಯಿತಿಯ ಸಾಮಾನ್ಯ ಸಭೆ ಹಾಗೂ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಅಧ್ಯಕ್ಷತೆಯಲ್ಲಿನಡೆದಜನಸಂಪರ್ಕಸಭೆಯ ಕುಂದುಕೊರತೆ ಹಾಗೂ ಆಹವಾಲು ಸ್ವೀಕಾರ ಸಂದರ್ಭದಲ್ಲಿ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾಮಗಾರಿಗಳು, ಮೂಲಭೂತ ಸೌಕರ್ಯಗಳು ಹಾಗೂ ಶಾಲೆಗಳ ದುರಸ್ಥಿತಿಯ ಬಗ್ಗೆ ಸದಸ್ಯರೊಡನೆ ಚರ್ಚಿಸಿ ಆಯವ್ಯಯವನ್ನು ಸಿದ್ದಪಡಿಸಲಾಗಿದೆ. ಪ್ರಸ್ತುತ 2024–25ರ ಗ್ರಾಮ ಪಂಚಾಯಿತಿಯ ಒಟ್ಟು ಆದಾಯ 45,45,8968 ಕೋಟಿ ಆಗಿದ್ದು, ಆಪೈಕಿ 36,56,9248 ವೆಚ್ಚವಾಗಲಿದ್ದು, ಅಂದಾಜು 38,89,720 ಲಕ್ಷ ಉಳಿತಾಯ ಬಜೆಟ್‌ನ್ನು ನಮ್ಮ ಗ್ರಾಮ ಪಂಚಾಯಿತಿ ಹೊಂದಿದ್ದು ಆಯವ್ಯಯವನ್ನು ಸಿದ್ದಪಡಿಸಲು ಸಹಕರಿಸಿದ ಎಲ್ಲರಿಗೂ ಧನ್ಯವಾದ ಅರ್ಪಿಸುವುದಾಗಿ ತಿಳಿಸಿದರು.

ಉಪಾಧ್ಯಕ್ಷ ಓಬಯ್ಯ, ಸದಸ್ಯರಾದ ಎಂ.ಕುಮಾರಸ್ವಾಮಿ, ಪಾತಲಿಂಗಪ್ಪ, ಅಂಗಡಿರಮೇಶ್, ಎಂ.ಹಿದಾಯಿತ್‌ವುಲ್ಲಾ, ಯರ್ರಮ್ಮ ಓಬಯ್ಯ, ಶಿವಲಿಂಗಮ್ಮ, ಬಿ.ಸಿ.ಸತೀಶ್‌ಕುಮಾರ್, ಡಿ.ರಾಜು, ಎನ್. ಮಂಜುನಾಥ, ಗೌರಮ್ಮ, ರೇಣುಕಮ್ಮ, ವಿಜಯಮ್ಮ, ದ್ಯಾಮಲಾಂಭ, ಮಂಗಳಮ್ಮ, ಗದ್ದಿಗೆಪ್ರಭು, ಮಂಜುಳಾ, ಲಕ್ಷ್ಮಿದೇವಿ, ಷಣ್ಮುಖಪ್ಪ, ಎನ್.ನವೀನ್‌ಕುಮಾರ್, ಕಾರ್ಯದರ್ಶಿ ವಿ.ಮಂಜುಳಾ, ಗ್ರಂಥಪಾಲಕ ನಿರಂಜನಮೂರ್ತಿ, ಎನ್.ಬಿ.ಮಂಜುನಾಥ, ಡಿ.ಬಿ.ಓಬಣ್ಣ, ಎನ್.ಓ.ನಾಗರಾಜು, ಚೈತನ್ಯ, ಶಿಲ್ಪ, ಮಹಂತೇಶ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್



**ಹೊಸದುರ್ಗ ಪಟ್ಟಣದ ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಪುರಸಭೆ ಮಾಜಿ ಸದಸ್ಯ ವೆಂಕಟೇಶ್ ದಳವಾಯಿ ಅವರು ಮಗುವಿಗೆ ಪಲ್ಸ್ ಪೋಲೀಯೋ ಲಸಿಕೆ ಹಾಕಿದರು. ಆಸ್ಪತ್ರೆಯ ಆಡಳಿತಾಧಿಕಾರಿ ಡಾ.ಯು. ಎಸ್.ಸಂಜಯ್, ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು, ಆರೋಗ್ಯ ಇಲಾಖೆ ಅಶೋಕ್ ಮತ್ತಿತರಿದ್ದರು.**

### ಹೊಸದುರ್ಗ:ನಾಳೆ ಪ್ರಾಣಿ ಬಲಿ ನಿಷೇಧ

» **ಹೊಸದುರ್ಗ**

ಮಾರ್ಚ್ 8 ರಂದು ಶುಕ್ರವಾರ ಮಹಾಶಿವರಾತ್ರಿ ಇರುವುದರಿಂದ ಪಟ್ಟಣದ ವ್ಯಾಪ್ತಿಯಲ್ಲಿ ಬರುವ ಮಾಂಸ ಮತ್ತು ಕೋಳಿ ಮಾರಾಟ ಮಾಡುವ ಮಾಲಿಕರಿಗೆ ಮೇ.8 ರಂದು ಶುಕ್ರವಾರ ಪ್ರಾಣಿ ಬಲಿ ಮತ್ತು ಮಾಂಸ ಮಾರಾಟವನ್ನ ಸರ್ಕಾರ ಸಂಪೂರ್ಣವಾಗಿ ನಿಷೇಧಿಸಿದ್ದು ಈ ದಿನದಂದು ಮಾಲಿಕರು ತಮ್ಮ ತಮ್ಮ ಅಂಗಡಿ ಮುಗ್ಗಟ್ಟುಗಳನ್ನು ಬಂದ್ ಮಾಡಿ ಸಹಕರಿಸಬೇಕೆಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮಾರಾಜು ಜಿ.ವಿ ಪ್ರಕಟಣೆಯಲ್ಲಿ ತಿಳಿಸಿದ್ದು ಒಂದು ವೇಳೆ ನಿಯಮ ಉಲ್ಲಂಘಿಸಿದರೆ ಕಾನುನು ರೀತಿ ಸೂಕ್ರ ಕ್ರಮ ಜರುಗಿಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

### ಐ ಜಿ ಚಂದ್ರಶೇಖರಯ್ಯ ನಿಧನಕ್ಕೆ ಪಂಡಿತಾರಾಧ್ಯ ಶ್ರೀಗಳ ಸಂತಾಪ



» **ಹೊಸದುರ್ಗ**

ಶಿಕ್ಷಣ ಶಾಸ್ತ್ರದ ಉಪನ್ಯಾಸಕ, ಸಿರಿಗೆರೆ ಬಿ ಎಲ್ ಆರ್ ಪದವಿಪೂರ್ವ ಕಾಲೇಜಿನ ನಿವೃತ್ತ ಪ್ರಾಚಾರ್ಯ, ಅಣ್ಣನ ಬಳಗದ ಅಧ್ಯಕ್ಷ ಹೀಗೆ ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸೇವೆ ಸಲ್ಲಿಸಿ ಸಾಣೇಹಳ್ಳಿಯಲ್ಲಿ ವಾಸವಾಗಿದ್ದ ಐ ಜಿ ಚಂದ್ರಶೇಖರಯ್ಯ ಅವರ ನಿಧನಕ್ಕೆ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ತೀವ್ರ ಸಂತಾಪ ವ್ಯಕ್ತಪಡಿಸಿದಿದ್ದಾರೆ ತಮ್ಮ ಸಂತಾಪ ಸೂಚಕದಲ್ಲಿ ತಿಳಿಸಿರುವ ಅವರು ಐ ಜಿ ಚಂದ್ರಶೇಖರಯ್ಯ ಇನ್ನಿಲ್ಲ ಎಂದರೆ ನಂಬಲಾಗುತ್ತಿಲ್ಲ. ಮಂಗಳವಾರ ಮಧ್ಯಾಹ್ನ ನಮ್ಮೊಂದಿಗೆ ಮಾತನಾಡಿದ್ದ ಚಂದ್ರಶೇಖರಯ್ಯ ಹೃದಯ ಕಾಯಿಲೆಯಿಂದ ಬುವಾರ ಬೆಳಗ್ಗೆ ಒಂಬತ್ತು ಗಂಟೆಯ ಸುಮಾರಿಗೆ ದಾವಣಗೆರೆಯ ಎಸ್ ಎಸ್ ಹೈಟೆಕ್ ಆಸ್ಪತ್ರೆಯಲ್ಲಿ ನಿಧನರಾಗಿದ್ದು ತುಂಬಲಾರದ ನಷ್ಟ. ಉತ್ತಮ ಉಪನ್ಯಾಸಕರು, ಪ್ರಾಚಾರ್ಯರು, ಭಾಷಣಕಾರರು, ಲೇಖಕರು, ಪತ್ರಿಕಾ ವರದಿಗಾರರು ಹಾಗೂ ಜಂಗಮರೂ ಆಗಿ ಸಲ್ಲಿಸಿದ ಸೇವೆ ಅವಿಸ್ಮರಣೀಯ. ನಿವೃತ್ತರಾದನಂತರ ನಮ್ಮ ಜೊತೆಯಲ್ಲಿದ್ದು ಎಲ್ಲ ಕೆಲಸ ಕಾರ್ಯಗಳಿಗೆ ಸಹಕರಿಸುತ್ತಿದ್ದರು ಎಂದು ತಿಳಿಸಿದ ಶ್ರೀಗಳು ಅವರ ಅಂತಿಮ ಸಂಸ್ಕಾರ ಇಂದೇ ಮಾ. 6 ರಂದು ಬುಧವಾರ ಸಂಜೆ 4 ಗಂಟೆಗೆ ಸಾಣೇಹಳ್ಳಿಯಲ್ಲೇ ನಡೆಸಲಾಯಿತು. ಅವರ ಅನಿರೀಕ್ಷಿತ ಅಗಲುವಿಕೆಯಿಂದ ಆಗಿರುವ ದುಃಖವನ್ನು ಸಹಿಸುವ ಶಕ್ತಿಯನ್ನು ಬಸವಾದಿ ಶಿವಶರಣರು ಅವರ ಪತ್ನಿ ಮತ್ತು ಮಕ್ಕಳು ಹಾಗೂ ಬಂಧುಗಳಿಗೆ ಕರುಣಿಸಲಿ ಎಂದು ಹಾರೈಸಿದ್ದಾರೆ.

### ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಅರ್ಜಿ ಆಹ್ವಾನ

» **ದಾವಣಗೆರೆ**

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ವತಿಯಿಂದ ಪರಿಶಿಷ್ಟ ಪಂಗಡದ ಜನಾಂಗದವರ ಆರ್ಥಿಕ ಸಬಲೀಕರಣಕ್ಕಾಗಿ ಪಂಗಡದ ನಿರುದ್ಯೋಗ ಯುವಕ, ಯುವತಿಯರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿಪಡೆದನಿರುದ್ಯೋಗಯುವಕ,ಯುವತಿಯರು ಎಲೆಕ್ಟ್ರಾನಿಕ್ ಹಾಗೂ ಡಿಜಿಟಲ್ ಮಾಧ್ಯಮದಲ್ಲಿ ಜಿಲ್ಲಾ, ತಾಲ್ಲೂಕು ಮಟ್ಟದಲ್ಲಿ ಉದ್ದಿಮೆಯನ್ನು ಸ್ಥಾಪಿಸಲು ಘಟಕದ ವೆಚ್ಚದ ಶೇ.70 ರಷ್ಟು ಅಥವಾ 5 ಲಕ್ಷಗಳ ಸಹಾಯಧನವನ್ನು ಪಡೆಯಬಹುದು. ಅರ್ಜಿಗಳನ್ನು ಆಫ್‌ಲೈನ್ ಮೂಲಕ ಮಾ.31 ರೊಳಗಾಗಿ ಅರ್ಜಿ ಸಲ್ಲಿಸಬೇಕು. ತರಬೇತಿಗೆ ಅರ್ಜಿಗಳನ್ನು ಕಚೇರಿಯಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಗ್ಲಾಸ್‌ಹೌಸ್ ಹತ್ತಿರ ದೂ.ಸಂ.08192-233309 ಗೆ ಸಂರ್ಪಕಿಸಬಹುದು.

**ದಿಶಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಸೂಚನೆ**

# ಕುಡಿಯುವ ನೀರಿನ ಸಮಸ್ಯೆಗೆ ತ್ವರಿತವಾಗಿ ಸ್ಪಂದಿಸಿ





» **ಚಿತ್ರದುರ್ಗ**

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಅಧಿಕಾರಿಗಳು ತ್ವರಿತವಾಗಿ ಸ್ಪಂದಿಸಬೇಕು. ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಹೆಚ್ಚಿನ ಗಮನಹರಿಸಬೇಕು ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು ಹಾಗೂ ಸಂಸದರಾದ ಎ. ನಾರಾಯಣಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕುಡಿಯುವ ನೀರಿನ ಸಮಸ್ಯೆಯ ದೂರುಗಳು ಬಂದಾಗ ಅಧಿಕಾರಿಗಳು ಚುನಾವಣೆ ಕೆಲಸ ಎಂದು ಹೇಳದೇ ಮುತುವರ್ಜಿಯಿಂದ ಕಾರ್ಯನಿರ್ವಹಿಸಬೇಕು. ಕುಡಿಯುವ ನೀರಿನ ಪೂರೈಕೆಗೆ ಚುನಾವಣಾ ನೀತಿ ಸಂಹಿತೆ ಅಡ್ಡಿಯಾಗುವುದಿಲ್ಲ. ಬೇಸಿಗೆ ಗಂಭೀರವಾಗಿರುವುದರಿಂದ ಕುಡಿಯುವ ನೀರಿಗೆ ಹೆಚ್ಚಿನ ಗಮನ ನೀಡಬೇಕು ಎಂದು ಹೇಳಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಮಾತನಾಡಿ, ಜಿಲ್ಲೆಯಲ್ಲಿ 189 ಗ್ರಾಮ ಪಂಚಾಯಿತಿಗಳಿದ್ದು, 1069 ಗ್ರಾಮಗಳಿವೆ. 19 ಗ್ರಾಮ ಪಂಚಾಯಿತಿಗಳ 47 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದೆ. ಈಗಾಗಲೇ 35 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ.

ಮುಂದಿನ ಕೆಲವು ದಿನಗಳಲ್ಲಿ 364 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬರುವ ಸಾಧ್ಯತೆ ಇದೆ. ಜಿಲ್ಲೆಯಲ್ಲಿ ಅಂತರ್ಜಲ ಮಟ್ಟವೂ 13 ಅಡಿ ಕೆಳಗೆ ಹೋಗಿದೆ ಎಂದು ತಿಳಿಸಿದ ಅವರು, ಈಗಾಗಲೇ ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಲಾಗಿದ್ದು, 13 ಬೋರ್‌ವೆಲ್ ಮಾಲೀಕರೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಖಾಸಗಿ ಬೋರ್‌ವೆಲ್‌ಗಳಲ್ಲಿನೀರುಕಡಿಮೆಯಾದರೆ ಟ್ಯಾಂಕರ್ ಮೂಲಕ ನೀರು ಪೂರೈಕೆ ಹಾಗೂ ಹೊಸ ಕೊಳವೆಬಾವಿ ಕೊರೆಸಲು ನಿರ್ಧರಿಸಲಾಗಿದೆ ಎಂದರು.

ಜಿಲ್ಲೆಯ ಎಲ್ಲ ತಾಲ್ಲೂಕಿಗೂ ಈಗಾಗಲೇ ಆರ್‌ಡಿಪಿಆರ್ ವತಿಯಿಂದ ರೂ.25 ಲಕ್ಷ ಬಿಡುಗಡೆ ಮಾಡಲಾಗಿದೆ. ಕುಡಿಯುವ ನೀರಿಗೆ ಸಂಬಂಧಪಟ್ಟಂತೆ ರೂ.2.70 ಕೋಟಿ ಬಿಡುಗಡೆಯಾಗಿದ್ದು, ಕುಡಿಯುವ ನೀರಿನ ಸಮಸ್ಯೆ ಬಂದ ತಕ್ಷಣ, ಸ್ಪಂದಿಸಿ ಪರಿಹರಿಸಲಾಗುವುದು. ಜಿಲ್ಲಾ ಹಾಗೂ ತಾಲ್ಲೂಕು ಕಚೇರಿಗಳಲ್ಲಿ ಸಹಾಯವಾಣಿ ಪ್ರಾರಂಭಿಸಲಾಗಿದ್ದು, ಇದಕ್ಕಾಗಿ ನೋಡಲ್ ಅಧಿಕಾರಿ ನೇಮಕ ಮಾಡಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ವಿಧಾನಪರಿಷತ್‌ಸದಸ್ಯಕೆ.ಎಸ್.ನವೀನ್ ಮಾತನಾಡಿ, ಕುಡಿಯುವ ನೀರು ಸಮಸ್ಯೆ ನಿವಾರಣೆಗಾಗಿ ಜಿಲ್ಲೆಯ 189 ಗ್ರಾಮ ಪಂಚಾಯಿತಿಗಳು ಒಳಗೊಂಡಂತೆ ಜೂನ್ ಮಾಹೆಯವರಗೂ ಕ್ರಿಯಾ ಯೋಜನೆ ರೂಪಿಸಬೇಕು. ಈ ಬಾರಿಯ ಬೇಸಿಗೆ ತುಂಬಾ ಗಂಭೀರವಾಗಿದೆ. ಜನ-ಜಾನುವಾರುಗಳಿಗೆ ನೀರು ಕೊಡಲು ಗಮನಹರಿಸಬೇಕು. ಜವಾಬ್ದಾರಿಯುತ ಅಧಿಕಾರಿಯನ್ನು ಗ್ರಾಮ ಪಂಚಾಯಿತಿಗೆ ನಿಯೋಜನೆ ಮಾಡಿ, ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲೆಯ ಯಾವುದೇ ನಗರ ಹಾಗೂ ಪಟ್ಟಣಗಳಲ್ಲಿ ನೀರು ಸಮಸ್ಯೆಯಾಗಿದೆ ಎಂಬ ದೂರು ಬರಬಾರದು. ಜಾತ್ರೆಗಳಲ್ಲಿ ಲಕ್ಷಾಂತರ ಜನರು ಸೇರುತ್ತಾರೆ. ಅಂತಹ ಸಂದರ್ಭದಲ್ಲಿ ಕುಡಿಯುವ ನೀರು ಪೂರೈಕೆಗೆ ಅಗತ್ಯಕ್ರಮವಹಿಸಬೇಕು. ನೀರಿನ ಸ್ವಚ್ಛತೆ ಹಾಗೂ ಶುದ್ಧ ಕುಡಿಯುವ ನೀರು ಪೂರೈಕೆ ಮಾಡಬೇಕು ಎಂದು ತಾಕೀತು ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾ ಆರೋಗ್ಯಮತ್ತುಕುಟುಂಬಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಜಿಲ್ಲೆಯ 9 ಸಾವಿರ ಜಲಮೂಲ ಸಂಗ್ರಹಾರಗಳನ್ನು ಪ್ರತಿ ಮೂರು ತಿಂಗಳಿಗೊಮ್ಮೆ ಪರೀಕ್ಷೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿಟಿ.ವೆಂಕಟೇಶ್‌ಮಾತನಾಡಿ, ಕುಡಿಯುವ ನೀರಿನ ಸಮಸ್ಯೆಗೆ ತ್ವರಿತವಾಗಿ ಸ್ಪಂದಿಸಲು ಈಗಾಗಲೇ ಸಹಾಯವಾಣಿ ಪ್ರಾರಂಭಿಸಲಾಗಿದೆ. ಕುಡಿಯುವ ನೀರು ಪೂರೈಕೆಗೆ ಅನುದಾನವೂ ಇದೆ. ತಕ್ಷಣವೇ ಸಮಸ್ಯೆಗೆ ಸ್ಪಂದಿಸಲಾಗುವುದು. ಅಧಿಕಾರಿಗಳೊಂದಿಗೆ ಸರಣಿ ಸಭೆಗಳನ್ನು ನಡೆಸಲಾಗಿದ್ದು, ಕುಡಿಯುವ ನೀರಿನ ವಿಷಯದಲ್ಲಿ ನಿರ್ಲಕ್ಷ್ಯ ತೋರುವಂತಿಲ್ಲ ಎಂದು ತಾಕೀತು ಮಾಡಲಾಗಿದೆ ಎಂದು ಹೇಳಿದರು.

**ಹೆಚ್ಚಿನ ಸಿಜೇರಿಯನ್ ಹೆರಿಗೆಗೆ ಕಾರಣ ಪತ್ತೆ ಹಚ್ಚಲು ಸೂಚನೆ:** ಅತಿ ಹೆಚ್ಚಿನ ಸಿಜೇರಿಯನ್ ಹೆರಿಗೆ ಪ್ರಮಾಣ ಜರುಗುವ ಜಿಲ್ಲೆಗಳ ಪೈಕಿ, ಚಿತ್ರದುರ್ಗ ಜಿಲ್ಲೆ ರಾಜ್ಯದಲ್ಲಿ ಎರಡನೇ ಸ್ಥಾನದಲ್ಲಿದೆ. ಸಿಜೇರಿಯನ್ ಹೆರಿಗೆ ಪ್ರಮಾಣದ ರಾಷ್ಟ್ರೀಯ ಸರಾಸರಿ ಶೇ.20 ರಷ್ಟು ಮಾತ್ರ ಇದೆ. ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ಜರುಗುವ ಸಿಜೇರಿಯನ್ ಹೆರಿಗೆ ಪ್ರಮಾಣ ಶೇ.65ಕ್ಕಿಂತಲೂ ಹೆಚ್ಚಿರುವ ಬಗ್ಗೆ, ದಿಶಾ ಸಭೆಯಲ್ಲಿ ಕಳವಳ ವ್ಯಕ್ತ ಪಡಿಸಲಾಯಿತು.

ಕೇಂದ್ರ ಸಾಮಾಜಿಕ ನ್ಯಾಯ ಹಾಗೂ ಸಬಲೀಕರಣ ರಾಜ್ಯ ಖಾತೆ ಸಚಿವ ಎ.ನಾರಾಯಣಸ್ವಾಮಿ ಸಿಜೇರಿಯನ್ ಹೆರಿಗೆ ಪ್ರಮಾಣ ತಡೆಗಟ್ಟಲು ಕೈಗೊಂಡಿರುವ ಕ್ರಮಗಳ ಕುರಿತು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಾಸದ್ ಅವರನ್ನು ಪ್ರಶ್ನಿಸಿ, ಸಿಜೇರಿಯನ್‌ನಲ್ಲಿ ಚಿತ್ರದುರ್ಗ ರಾಜ್ಯದಲ್ಲಿಯೇ ಎರಡನೆ ಸ್ಥಾನ ಪಡೆದಿರುವುದು ಅವಮಾನಕರ ಸಂಗತಿಯಾಗಿದೆ. ಯಾವ ಕಾರಣಕ್ಕಾಗಿ ಸಿಜೇರಿಯನ್ ಹೆರಿಗೆ ಹೆಚ್ಚಾಗುತ್ತಿದೆ? ವೈದ್ಯರು ಹಣ ಪಡೆಯುವ ಇಚ್ಚೆಯಿಂದ ಸಿಜೇರಿಯನ್ ಮಾಡಲು ಮುಂದಾಗುತ್ತಿದ್ದಾರಾ?, ಎಂದು ಕೇಳಿದರು.

ಜಿಲ್ಲಾ ಆಸ್ಪತ್ರೆಯ ಹೊರ ರೋಗಿಗಳ ವಿಭಾಗದಲ್ಲಿ ಚೀಟಿ ಮಾಡಲು ಗಂಟೆಗಟ್ಟಲೇ ಸರತಿಯಲ್ಲಿ ನಿಲ್ಲಬೇಕಿದೆ. ಆರೋಗ್ಯ ಸರಿ ಇರದ ರೋಗಿಗಳು ಕುಳಿತುಕೊಳ್ಳಲು ಸರಿಯಾದ ವ್ಯವಸ್ಥೆಯಿಲ್ಲ. ಬಿಸಿಲು ಧಗಧಗಿಸುತ್ತಿದ್ದರು ಫ್ಯಾನ್ ಅಳವಡಿಸಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಇತ್ತೀಚಿಗೆ ಜಿಲ್ಲೆಯಲ್ಲಿ ನ್ಯುಮೋನಿಯಾಗೆ ತುತ್ತಾಗಿ ಆಸ್ಪತ್ರೆ ಬರುವ ರೋಗಿಗಳ ಸಂಖ್ಯೆ ಹೆಚ್ಚಿದೆ. ಇದರ ಬಗ್ಗೆ ಯಾವ ಲೆಕ್ಕವೂ ಇಲ್ಲ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿಗಳು ಎಷ್ಟು ಪ್ರಾಥಮಿಕ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ, ಕರ್ತವ್ಯ ನಿರ್ಲಕ್ಷ ತೋರಿದವರ ಮೇಲೆ ಕ್ರಮ ಕೈಗೊಂಡಿದ್ದೀರಿ, ಕಾರಣ ಕೇಳಿ ನೋಟಿನ್ ನೀಡಿದ್ದೀರಿ ಎಂದು ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಪ್ರಶ್ನಿಸಿದರು.

ಕೇಂದ್ರ ಸಚಿವರ ಮಾತಿ ಧ್ವನಿಗೂಡಿಸಿದ ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಚಿತ್ರದುರ್ಗ ಜಿಲ್ಲೆಯ ಹೆಣ್ಣು ಮಕ್ಕಳಿಗೆ ಸಾಮಾನ್ಯ ಹೆರಿಗೆ ಆಗುವುದಿಲ್ಲವೇ? ಎಲ್ಲರೂ ಸಿಜೇರಿಯನ್‌ಗೆ ಒಳಗಾಗಬೇಕೆ? ಎಂದು ಖಾರವಾಗಿ ಪ್ರಶ್ನಿಸಿ, ಕೂಡಲೇ ಆರೋಗ್ಯ ಇಲಾಖೆ ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಸಿಜೇರಿಯನ್ ಪ್ರಕರಣಗಳ ಕಾರಣ ಪತ್ತೆ ಹಚ್ಚುವಂತೆ ಸೂಚನೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಾಸದ್ ಉತ್ತರಿಸಿ, ಅಧಿಕಾರ ವಹಿಸಿಕೊಂಡು ಐದು ತಿಂಗಳು ಆಗಿದೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಲಾಗುತ್ತಿದೆ. ಇದುವರೆಗೂ ಕರ್ತವ್ಯ ಲೋಪ ಎಸಗಿದ ನಾಲ್ಕು ವೈದ್ಯಾಧಿಕಾರಿಗಳನ್ನು ಅನುಮಾನತು ಮಾಡಿ ಎಂಬುದಾಗಿ ಇಲಾಖೆ ಆಯುಕ್ತರಿಗೆ ಪತ್ರ ಬರೆದಿರುವುದಾಗಿ ತಿಳಿಸಿದರು.

ಜಿಲ್ಲೆಯ ಗರ್ಭಿಣಿ ಹೆಣ್ಣು ಮಕ್ಕಳಲ್ಲಿ ಅನೀಮಿಯಾ ಹಾಗೂ ಅಪೌಷ್ಠಿಕತೆ ಹೆಚ್ಚಾಗಿ ಕಂಡುಬರುವುದರಿಂದ ಹೆರಿಗೆ ಸಂದರ್ಭದಲ್ಲಿ ಹೆಚ್ಚಿನ ಸಿಜೇರಿಯನ್ ಮಾಡಲಾಗುತ್ತಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂಧರ್ ಕುಮಾರ್ ಮೀನಾ ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು ನಾಲ್ಕು ರಾಷ್ಟ್ರೀಯ ಹೆದ್ದಾರಿಗಳು ಹಾದುಹೋಗಿವೆ. ರಾಷ್ಟ್ರೀಯ ಹೆದ್ದಾರಿಗಳಲ್ಲಿ 78, ರಾಜ್ಯ ಹೆದ್ದಾರಿಗಳಲ್ಲಿ 67 ಅಪಘಾತ ವಲಯಗಳನ್ನಾಗಿ ಗುರುತಿಸಲಾಗಿದೆ. ರಸ್ತೆ ಅಪಘಾತಗಳಿಂದ ವರ್ಷಕ್ಕೆ 500ಕ್ಕೂ ಹೆಚ್ಚು ಜನರು ಸಾವಿಗೀಡಾಗುತ್ತಿದ್ದಾರೆ. ರಸ್ತೆಗಳಲ್ಲಿ ಸರಿಯಾದ ನಾಮಫಲಕ ಇಲ್ಲದಿರುವುದು, ವೈಟ್ ಮಾರ್ಕ್ ಇಲ್ಲದಿರುವುದು, ಅವೈಜ್ಞಾನಿಕ ರಚನೆ ಇತ್ಯಾದಿ ರಸ್ತೆ ಸುರಕ್ಷತಾ ಕ್ರಮಗಳು ಅನುಷ್ಠಾನ ಮಾಡದೇ ಇರುವುದರಿಂದ ರಸ್ತೆ ಅಪಘಾತಗಳು ಹೆಚ್ಚಾಗುತ್ತಿವೆ. ಹಾಗಾಗಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ರಸ್ತೆ ಸುರಕ್ಷತಾ ಕ್ರಮಗಳಿಗೆ ಹೆಚ್ಚಿನ ಗಮನ ಹರಿಸಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಎಂ.ಕಾರ್ತೀಕ್ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

## ಶಿಕ್ಷಕರ ಭೌದ್ಧಿಕ ಮಟ್ಟ ಹೆಚ್ಚಳಕ್ಕೆ ಸಂಘ ಶ್ರಮಿಸಲಿದೆ

» **ಚಿತ್ರದುರ್ಗ**

ಗುಣಮಟ್ಟದ ಶಿಕ್ಷಣಕ್ಕಾಗಿ ಎಲ್ಲಾ ಶಿಕ್ಷಕರು ಶ್ರಮಿಸಬೇಕು, ಜಿಲ್ಲೆಯ ಶಿಕ್ಷಕರ ಸಮಸ್ಯೆಗಳ ಬಗ್ಗೆ ಇಲಾಖೆಯ ಸಹಕಾರದೊಂದಿಗೆ ಸ್ಪಂದಿಸುವುದರೊಂದಿಗೆ ಪ್ರತಿ ಶಾಲಾ ಶಿಕ್ಷಕರ ಭೌದ್ಧಿಕ ಮಟ್ಟ ಹೆಚ್ಚಳಕ್ಕೆ ನಮ್ಮ ಸಂಘವು ಪ್ರಾಮಾಣಿಕವಾಗಿ ಶ್ರಮಿಸಲಿದೆ ಎಂದು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷರಾದ ಜಿ.ಬಿ.ಮಹಂತೇಶ್ ಭರವಸೆ ನೀಡಿದರು.

ನಗರದ ತರಾಸು ರಂಗಮಂದಿರಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿದ್ದ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನೂತನ ಜಿಲ್ಲಾ ಪದಾಧಿಕಾರಿಗಳು ಮತ್ತು ತಾಲೂಕು ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.




ಪ್ರಾಥಮಿಕ ಶಾಲಾ ಶಿಕ್ಷಕರಾದ ನಾವು ಹೇಳಿಕೊಟ್ಟ ಶಿಕ್ಷಣವೇ ಮುಖ್ಯ ಅದರಿಂದ ಮುಂದೆ ನಮ್ಮ ಮಕ್ಕಳು ಉನ್ನತ ಶಿಕ್ಷಣದಲ್ಲಿ ಉತ್ತಮ ಶ್ರೇಣಿಯಲ್ಲಿರುತ್ತಾರೆ ಹಾಗಾಗಿ ಗುಣಮಟ್ಟದ ಶಿಕ್ಷಣಕ್ಕಾಗಿ ಎಲ್ಲಾ ಶಿಕ್ಷಕರು ಶ್ರಮಿಸಬೇಕು ಎಂದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾಧ್ಯಕ್ಷರಾದ ಕೆ.ಟಿ. ತಿಮ್ಮಾರೆಡ್ಡಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎಸ್. ನಾಗಭೂಷಣ್, ಮಾಜಿ ಜಿಲ್ಲಾಧ್ಯಕ್ಷರಾದ ಕೆ. ವೀರಣ್ಣ ಮತ್ತು ಆರ್. ಮಾರುತೇಶ್ ಮಾತನಾಡಿದರು.

## ಎಂ.ಎಸ್ಸಿ. ಕೃಷಿಯಲ್ಲಿ ಚಿತ್ರದುರ್ಗದ ಹೇಮಶ್ರೀಗೆ ಮೂರು ಚಿನ್ನದ ಪದಕ



**ಚಿತ್ರದುರ್ಗ:** ಚಿತ್ರದುರ್ಗದಲ್ಲಿ ಕಳೆದ 23 ವರ್ಷಗಳಿಂದಲೂ ತರಕಾರಿ ಮಾರಾಟ ಮಾಡಿಕೊಂಡು ಜೀವನ ಸಾಗಿಸುತ್ತಿರುವ ಪಿ.ಜಿ.ಗೋವಿಂದರಾಜು, ಗೀತಮ್ಮ ದಂಪತಿಗಳ ಪುತ್ರಿ ಹೇಮಶ್ರಿ ಪಿ.ಜಿ. ಇವರು ಎಂ.ಎಸ್ಸಿ. ಕೃಷಿ ಸಸ್ಯ ಜೀವ ರಸಾಯನಶಾಸ್ತ್ರದಲ್ಲಿ ಮೂರು ಗೋಲ್ಡ್ ಮೆಡಲ್ ಪಡೆದಿದ್ದಾರೆ. ಬೆಂಗಳೂರಿನ ಗಾಂಧಿ ಕೃಷಿ ವಿಶ್ವವಿದ್ಯಾನಿಲಯದಲ್ಲಿ ಎಂ.ಎಸ್ಸಿ. ಸಸ್ಯ ಜೀವರಸಾಯನ ಅಧ್ಯಯನ ಮಾಡಿದ ಹೇಮಶ್ರೀಗೆ ಕರ್ನಾಟಕ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್‌ರವರು ಬೆಂಗಳೂರಿನ ವಿಜ್ಞಾನ ಕೇಂದ್ರದಲ್ಲಿ ಚಿನ್ನದ ಪದಕ ಹಾಗೂ ಸರ್ಟಿಫಿಕೇಟ್ ನೀಡಿ ಗೌರವಿಸಿದರು.

**ಪ್ರಮುಖ ಸುದ್ದಿ**

**ದೊಡ್ಡ ಉಳ್ಳಾರ್ತಿಯಲ್ಲಿ ಗೋಶಾಲೆಗೆ ಚಾಲನೆ ನೀಡಿದ ಶಾಸಕ ಎನ್.ವೈ.ಗೋಪಾಲಕೃಷ್ಣ**

# ಜನರ ಸಂಕಷ್ಟಕ್ಕೆ ನೆರವಾಗಲು ಸರ್ಕಾರ ಸದಾಸಿದ್ಧ

» **ಚಳ್ಳಕೆರೆ**

ಸರ್ಕಾರ ಚಳ್ಳಕೆರೆ ತಾಲ್ಲೂಕುಸೇರಿದಂತೆ ರಾಜ್ಯದ ಹಲವಾರು ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶ ವ್ಯಾಪ್ತಿಗೆ ಸೇರ್ಪಡೆ ಮಾಡಿದ್ದು, ಆ ಭಾಗದ ಜನರಿಗೆ ಕುಡಿಯಲು ನೀರು, ಜಾನುವಾರುಗಳಿಗೆ ನೀರು, ಮೇವು ವಿತರಿಸಲು ಹಣ ಬಿಡುಗಡೆಗೊಳಿಸಿದ್ದು, ಅಧಿಕಾರಿ ವರ್ಗ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾರ್ಯನಿರ್ವಹಿಸಿ ಎಂದು ಮೊಳಕಾಲ್ಮೂರು ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ ತಿಳಿಸಿದರು.

ಅವರು, ತಾಲ್ಲೂಕಿನ ದೊಡ್ಡ ಉಳ್ಳಾರ್ತಿ ಗ್ರಾಮದಲ್ಲಿ ಗೋಶಾಲೆಯನ್ನು ಆರಂಭಿಸಿ ಪ್ರಸ್ತುತ ಗೋಶಾಲೆಯಲ್ಲಿ ಹಾಲಿ ಇರುವ ಜಾನುವಾರು,ಮೇವು,ಕುಡಿಯುವನೀರಿಬಗ್ಗೆ ಪಶುವೈದ್ಯಾಧಿಕಾರಿ ಡಾ.ರೇವಣ್ಣರವರಿಂದ ಮಾಹಿತಿ ಪಡೆದರು. ಸರ್ಕಾರ ಮಾಡಿರುವ ಈ ಗೋಶಾಲೆಯನ್ನು ರೈತರು ಪೂರ್ಣಪ್ರಮಾಣದಲ್ಲಿ ಸದ್ವಿನಿಯೋಗ ಪಡಿಸಿಕೊಳ್ಳಬೇಕು. ಪ್ರಸ್ತುತ ಸ್ಥಿತಿಯಲ್ಲಿ ಮನೆಯಲ್ಲೇ ಜಾನುವಾರುಗಳನ್ನು ಹಾರೈಕೆ ಮಾಡಲು ಸಾಧ್ಯವಿಲ್ಲ. ಗೋಶಾಲೆ ಪ್ರಾರಂಭದ ಮೂಲಕ ಸರ್ಕಾರ ನಿಮ್ಮ ನೆರವಿಗೆ ದಾವಿಸಿದೆ. ನಿಮ್ಮಲ್ಲಿರುವ ಎಲ್ಲಾ ದನಗಳನ್ನು ಗೋಶಾಲೆಗೆ ಬಿಡಿ. ಮುಂದಿನ ದಿನಗಳಲ್ಲಿ ಉತ್ತಮ ಮಳೆಯಾಗುವ ತನಕ ಗೋಶಾಲೆ ಕಾರ್ಯಾಂಭ ಮಾಡಲಿದೆ. ಸಿಎಂ ಹಾಗೂ ಡಿಸಿಎಂ ಗೋಶಾಲೆಗೆ ಅಗತ್ಯವಿರುವ ಹಣವನ್ನು ಜಿಲ್ಲಾಧಿಕಾರಿಗಳ ಖಾತೆಗೆ ಜಮಾ ಮಾಡಿದ್ದಾರೆ. ಅಧಿಕಾರಿ ವರ್ಗ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಗೋಶಾಲೆಯನ್ನು ನಿರ್ವಹಣೆ ಮಾಡಬೇಕು ಎಂದರು.



ಶಾಸಕ ಎನ್.ವೈ.ಗೋಪಾಲಕೃಷ್ಣ ನಾಯಕನಹಟ್ಟಿ ಹೋಬಳಿಯ ಹಿರೇಕೆರೆಕಾವಲ್‌ನಲ್ಲೂ ಸಹ ಗೋಶಾಲೆಗೆ ಚಾಲನೆ ನೀಡಿದರು. ಅಲ್ಲಿನ ರೈತರು ಈ ಭಾಗದಲ್ಲಿ ಹೆಚ್ಚು ಜಾನುವಾರುಗಳಿದ್ದು, ದೊಡ್ಡ ಪ್ರಮಾಣದಲ್ಲಿ ವ್ಯವಸ್ಥೆ ಕಲ್ಪಿಸುವಂತೆ ಮನವಿ ಮಾಡಿದರು. ಇದಕ್ಕೆ ಉತ್ತರಿಸಿದ ಶಾಸಕರು ಪ್ರಸ್ತುತ ಇಲ್ಲಿರುವ ಸೌಲಭ್ಯ ವಿನಿಯೋಗವಾಗಲಿ, ಬೇರೆ ಹೆಚ್ಚಿನ ಸೌಲಭ್ಯ ಬೇಕಾದಲ್ಲಿ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿ ಜಾನುವಾರುಗಳ ಸಂಕಷ್ಟಕ್ಕೆ ನೆರವಾಗುವ ಭರವಸೆ ನೀಡಿದರು. ತಹಶೀಲ್ದಾರ್ ರೇಹಾನ್‌ಪಾಷ, ಉಪತಹಶೀಲ್ದಾರ್ ಶಕುಂತಲ, ಎತ್ತಿನಹಟ್ಟಿಗೌಡ, ದೇವರಾಜು, ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಚೇತನ್‌ಕುಮಾರ್, ಗ್ರಾಮ ಲೆಕ್ಕಾಧಿಕಾರಿ ಉಮಾ, ಕೇಶವಮೂರ್ತಿ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T